ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೯೪

# ಪಟ್ಟಿ – ೧೯

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಬುಧವಾರ, ದಿನಾಂಕ : ೨೪ನೇ ಮಾರ್ಚ್, ೨೦೨೧

---

## ಸಮೂಹ – III

೧. ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು.

೨. ಕಂದಾಯ ಸಚಿವರು.

೩. ವಸತಿ ಸಚಿವರು.

೪. ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೬. ಸಮಾಜ ಕಲ್ಯಾಣ ಸಚಿವರು.

೭. ಪಶುಸಂಗೋಪನೆ ಸಚಿವರು.

## ರಾಜ್ಯ ಗೃಹ ನಿರ್ಮಾಣ ಸಂಸ್ಥೆಯ ಬಡಾವಣೆ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೫೫ (೧೯೯೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಗೃಹ ನಿರ್ಮಾಣ ಸಂಸ್ಥೆ ವತಿಯಿಂದ ಶಿವಮೊಗ್ಗ ನಗರ ವ್ಯಾಪ್ತಿಯಲ್ಲಿ ಹೊಸದಾಗಿ ೨೦೧೮–೧೯ನೇ ಸಾಲಿನಿಂದ ಇಲ್ಲಿಯುವರೆಗೆ ಎಷ್ಟು ಎಕರೆ ಜಾಗವನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ;

(ಆ) ಬಡಾವಣೆ ನಿರ್ಮಿಸಲು ಉದ್ದೇಶಿಸಿರುವ ಸ್ಥಳ ಯಾವುದು ? (ವಿವರ ಒದಗಿಸುವುದು)

## ಬೀದರ್ ಜಿಲ್ಲೆಯಲ್ಲಿ ಒಳನಾಡು ಮೀನುಗಾರಿಕೆ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೫೬ (೨೦೫೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ೨೦೧೯–೨೦ ರಿಂದ ೨೦೨೦–೨೧ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಈ ಜಿಲ್ಲೆಯಲ್ಲಿ ಮೀನುಗಾರಿಕೆ ಕಛೇರಿ ಕಟ್ಟಡ ನಿರ್ಮಾಣಕ್ಕಾಗಿ ೨೦೨೦–೨೧ನೇ ಸಾಲಿನಲ್ಲಿ ರೂ. ೧೦೦/–ಲಕ್ಷಗಳ

ಅನುದಾನವನ್ನು ಅಭಿವೃದ್ಧಿಗಾಗಿ ಒದಗಿಸಲಾಗಿತ್ತು, ಪ್ರಸ್ತುತ ಸದರಿ ಕಾಮಗಾರಿಯು ಯಾವ ಹಂತದಲ್ಲಿರುತ್ತದೆ ;

(ಇ) ಪ್ರಸ್ತುತ ಜಿಲ್ಲೆಯಲ್ಲಿರುವ ಮೀನು ಮಾರ್ಕೆಟ್‌ಗಳ ನಿರ್ವಹಣೆಗೆ ೨೦೨೦-೨೧ನೇ ಸಾಲಿನಲ್ಲಿ ಮೀಸಲಿಟ್ಟ ಅನುದಾನ ಎಷ್ಟು ; ಖರ್ಚಾದ ಅನುದಾನ ಎಷ್ಟು ; ಹಾಗೂ ಫಲಾನುಭವಿಗಳ ವಿವರ ನೀಡುವುದು ;

(ಈ) ಬೀದರ್ ಜಿಲ್ಲೆಯಲ್ಲಿ ಇಲಾಖೆಯಿಂದ ಪ್ರದರ್ಶನ ಮತ್ತು ತರಬೇತಿಗಾಗಿ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೭೭ (೨೦೫೬) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯-೨೦ ರಿಂದ ೨೦೨೦-೨೧ರ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ನಿರ್ವಹಣೆಗೆ ಮೀಸಲಿಟ್ಟ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಆ) ಪ್ರಸ್ತುತ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಕಟ್ಟಡ ನಿರ್ಮಾಣಕ್ಕೆ ತೆಗದುಕೊಂಡಿರುವ ಕಾಮಗಾರಿಗಳು ಯಾವುವು ; ಹಾಗೂ ಅದಕ್ಕೆ ಇಟ್ಟಿರುವ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು ;

(ಇ) ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹೊಲಿಗೆ ತರಬೇತಿ ಕೇಂದ್ರಗಳೆಷ್ಟಿವೆ ಹಾಗೂ ಇದರ ನಿರ್ವಹಣೆಗಾಗಿ ಖರ್ಚಾದ ಅನುದಾನವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ವಿವಿಧ ನಿಗಮಗಳಿಂದ ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನ ಕೊಳವೆ ಬಾವಿಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೮ (೨೦೫೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಿವಿಧ ನಿಗಮಗಳಿಂದ ಈ ಸಾಲಿನಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ; ಕೊರೆದಿದ್ದರೆ, ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು ;

(ಆ) ಈ ಯೋಜನೆ ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣವೇನು ;

(ಇ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಸರ್ಕಾರ ಅಳವಡಿಸುತ್ತಿರುವ ನಿಯಮಗಳೇನು ;

(ಈ) ಕೊರೆದ ಕೊಳವೆ ಬಾವಿಗಳಿಗೆ ವಿದ್ಯುತ್ ಸರಬರಾಜು ಮಾಡಲಾಗಿದೆಯೇ ; ವಿದ್ಯುತ್ ಸರಬರಾಜಿಗಾಗಿ ಜೆಸ್ಕಾಂಗೆ ಎಷ್ಟು ಹಣ ಪಾವತಿಸಲಾಗಿದೆ ? (ಫಲಾನುಭವಿಗಳವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಇಲಾಖೆಗೆ ಬಂದ ಲೆಕ್ಕಶೀರ್ಷಿಕೆ ೩೦೫೪ರ ಅನುದಾನದ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೯೯ (೨೦೬೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಗೆ ೨೦೨೦–೨೧ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ ೩೦೫೪ರಡಿ ಬಂದಿರುವ ಅನುದಾನ ಎಷ್ಟು ; ವಿಧಾನಸಭಾ ಕ್ಷೇತ್ರವಾರು ವಿವರವಾದ ಮಾಹಿತಿ ನೀಡುವುದು ;

(ಆ) ಈ ಅನುದಾನದ ಅಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಅವುಗಳ ಸ್ಥಿತಿಗತಿಗಳ ಕುರಿತು ಮಾಹಿತಿ ಒದಗಿಸುವುದು ?

## ರೈತ ಕುಟುಂಬಕ್ಕೆ ನಷ್ಟ ಪರಿಹಾರ ಹಣ ನೀಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೦೦ (೨೦೯೦) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಚಿರತೆ ಅಥವಾ ಇತರೆ ಕಾಡು ಪ್ರಾಣಿಗಳ ದಾಳಿಯಿಂದ ರೈತರ ಎಷ್ಟು ಜಾನುವಾರುಗಳು ಮೃತಪಟ್ಟಿವೆ ; (ಜಾನುವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಮೃತಪಟ್ಟ ಅಥವಾ ಗಾಯಗೊಂಡ ಸಾಕು ಪ್ರಾಣಿಗಳಿಗೆ ಸರ್ಕಾರದಿಂದ ಪರಿಹಾರ ಕಲ್ಪಿಸಲಾಗಿದೆಯೇ ; ಹಾಗಿದ್ದಲ್ಲಿ, (ಜಾನುವಾರುವಾರು, ತಾಲ್ಲೂಕುವಾರು ಪರಿಹಾರ ನೀಡಿರುವ ಫಲಾನುಭವಿಗಳ ವಿವರ ನೀಡುವುದು)

(ಇ) ನಾಗಮಂಗಲ ತಾಲ್ಲೂಕು ಹೊನಕೆರೆ ಹೋಬಳಿ ಶೆಟ್ಟಿಹಳ್ಳಿ ಗ್ರಾಮದಲ್ಲಿ ಇತ್ತೀಚೆಗೆ ೧೦ ಕುರಿಗಳು ಚಿರತೆ ದಾಳಿಯಿಂದ ಮೃತಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಸಂಬಂಧ ಸದರಿ ರೈತ ಕುಟುಂಬಕ್ಕೆ ಎಷ್ಟು ಪರಿಹಾರ ಧನ ನೀಡಲಾಗಿದೆ ; (ವಿವರ ನೀಡುವುದು)

(ಈ) ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ಚಿರತೆ ದಾಳಿಗಳು ಆಗಾಗ ನಡೆಯುತ್ತಲೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಸಂಬಂಧ ಚಿರತೆ ದಾಳಿಯನ್ನು ತಡೆಯಲು ಸರ್ಕಾರ ಯಾವ ಕ್ರಮಕೈಗೊಂಡಿದೆ ; (ವಿವರ ನೀಡುವುದು)

(ಉ) ರೈತ ಕುಟುಂಬಕ್ಕೆ ನಷ್ಟ ಪರಿಹಾರ ಧನ ನೀಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## A.I.C.R.P (All India Co-ordinated Research Project) ಯೋಜನೆಗೆ ತಾತ್ಕಾಲಿಕ ನೌಕರರನ್ನು ನೇಮಿಸಿಕೊಂಡು ಸರ್ಕಾರಕ್ಕೆ ನಷ್ಟ ಮಾಡಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೦೧ (೨೯೨) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) K.A.V.F.S ವಿಶ್ವ ವಿದ್ಯಾಲಯ ಬೀದರ್ ಅಧೀನದಲ್ಲಿರುವ ಮೀನುಗಾರಿಕೆ ಕಾಲೇಜಿನಲ್ಲಿ ಅನುಷ್ಠಾನ ಮಾಡಲಾಗುತ್ತಿರುವ A.I.C.R.P (All India Co-ordinated Research Project) ಯೋಜನೆಗೆ ೭೫% ಅನುದಾನ ಧನಸಹಾಯ ಸಂಸ್ಥೆಯಿಂದ ಹಾಗೂ ೨೫% ಅನುದಾನ ರಾಜ್ಯ ಸರ್ಕಾರದಿಂದ ನೀಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಈ ಯೋಜನೆಗೆ Contractual Co-terminus ಆಧಾರದ ಮೇಲೆ ನೇಮಕಗೊಂಡ ಸಿಬ್ಬಂದಿಗಳಿಗೆ ಸರ್ಕಾರದ ಸೇವಾ ನಿಯಮಾವಳಿಯಲ್ಲಿ ವೇತನ ಶ್ರೇಣಿ, ವಾರ್ಷಿಕ ವೇತನ ನೀಡಲು ಅವಕಾಶವಿದೆಯೇ ; ಈ ಬಗ್ಗೆ ಆರ್ಥಿಕ ಇಲಾಖೆಯಿಂದ ಒಪ್ಪಿಗೆ ಪಡೆಯಲಾಗಿದೆಯೇ ; (ದಾಖಲೆ ಪ್ರತಿ ಒದಗಿಸುವುದು)

(ಇ) ೨೦೧೦ನೇ ಸಾಲಿನಿಂದ ಇಲ್ಲಿಯವರೆವಿಗೂ ಸರ್ಕಾರದ ಸೇವಾ ನಿಯಮಾವಳಿಯಲ್ಲಿ ಅವಕಾಶ ಇಲ್ಲದಿದ್ದರೂ ಸಹ ಸರ್ಕಾರದ ಗಮನಕ್ಕೆ ತರದೇ ನಿಯಮಬಾಹಿರವಾಗಿ ವೇತನ ಶ್ರೇಣಿ, ವಾರ್ಷಿಕ ವೇತನ ನೀಡಿ, ರಾಜ್ಯ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟುಮಾಡಿರುವವರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ;

(ಈ) ಈ ಯೋಜನೆಯ ಸಂಬಂಧ ದೂರುಗಳು ಸಲ್ಲಿಕೆಯಾಗಿರುತ್ತಿರುವ ಕಾರಣ ಯೋಜನೆಯನ್ನು ನಿಲ್ಲಿಸಲು ಧನಸಹಾಯ ಸಂಸ್ಥೆಗೆ ಕೋರಿಕೆ ಸಲ್ಲಿಸದಿರುವುದು (ಸಂಬಂಧಿಸಿದ ಎಲ್ಲಾ ಪತ್ರ ವ್ಯವಹಾರದ ಪ್ರತಿಗಳನ್ನು ಒದಗಿಸುವುದು) ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಸರಿಪಡಿಸಲಾಗುವುದು ;

(ಉ) ಕಾಲೇಜಿನಲ್ಲಿ ಖಾಯಂ ಸಹಾಯಕ ಪ್ರಾಧ್ಯಾಪಕ/ನೌಕರರು ಇದ್ದರೂ ಸಹ ಯೋಜನೆಯ ಎಂ.ಓ.ಯು ನಂತೆ ಖಾಯಂ ಸಿಬ್ಬಂದಿಯನ್ನು ನಿಯೋಜಿಸಿಕೊಳ್ಳದೆ Contractual Co-terminus ಆಧಾರದ ಮೇಲೆ Senior Scientist ನೇಮಕ ಮಾಡಿಕೊಳ್ಳಲು ಕಾರಣವೇನು ;

(ಊ) ಸದರಿ ಯೋಜನೆಯು ಎಂ.ಓ.ಯು ನಂತೆ ೧ ವರ್ಷದೊಳಗೆ ಖಾಯಂ ಸಿಬ್ಬಂದಿಯನ್ನು ನೇಮಿಸಿಕೊಳ್ಳಬೇಕಾಗಿದ್ದು, ೧೦ ವರ್ಷ ಕಳೆದರೂ ಸಹ ಖಾಯಂ ಸಿಬ್ಬಂದಿಯನ್ನು ನೇಮಿಸಿಕೊಂಡಿಲ್ಲದಿರುವುದಕ್ಕೆ ಕಾರಣಗಳೇನು ? (ವಿವರ ನೀಡುವುದು)

## ರಾಜ್ಯದ ಜಲಾಶಯ ಹಾಗೂ ಕೆರೆಗಳಲ್ಲಿ ಮೀನುಗಾರಿಕೆ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೦೨ (೨೯೧) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಲಾಶಯ ಹಾಗೂ ಕೆರೆಗಳಲ್ಲಿ ಮೀನುಗಾರಿಕೆ ಅಭಿವೃದ್ಧಿಪಡಿಸಲು ಯಾವ ಯೋಜನೆಗಳನ್ನು ರೂಪಿಸಲಾಗಿದೆ; ಈ ಯೋಜನೆ ಉಪಯೋಗ ಪಡೆಯಲು ಯಾವ ಮಾನದಂಡಗಳನ್ನು ರೂಪಿಸಲಾಗಿದೆ ; (ವಿವರ ನೀಡುವುದು)

(ಆ) ೨೦೧೫–೧೬ ರಿಂದ ಇಲ್ಲಿಯವರೆವಿಗೂ ರಾಜ್ಯದ ಜಲಾಶಯ ಹಾಗೂ ಕೆರೆಗಳಲ್ಲಿ ವಿವಿಧ ಯೋಜನೆಗಳಿಗೆ ಇಲಾಖೆಯಿಂದ ಎಷ್ಟು ಮೀನು ಮರಿಗಳನ್ನು ಯಾವ ಮೂಲಗಳಿಂದ ಬಿಡಲಾಗಿದೆ;

(ಇ) ಜಲಾಶಯ ಮತ್ತು ಕೆರೆಗಳಿಗೆ ಬಿಡಲು ಅವಶ್ಯವಿರುವಷ್ಟು ಮೀನು ಮರಿಗಳ ಪ್ರಮಾಣ ರಾಜ್ಯದಲ್ಲಿ ಲಭ್ಯವಿದೆಯೇ ; ಕಳೆದ ೫ ವರ್ಷಗಳಿಂದ ಯಾರಿಂದ ಖರೀದಿಸಲಾಗಿದೆ ; (ವಿವರ ನೀಡುವುದು)

(ಈ) ರಾಜ್ಯದ ಯಾವುದೇ ಭಾಗದಲ್ಲಿ ಹೊಸದಾಗಿ ಮೀನುಮರಿ ಉತ್ಪಾದನಾ ಕೇಂದ್ರ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕ್ರಮಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಪ್ರತೀ ವರ್ಷ ಯಾವ ಆಧಾರದ ಮೇಲೆ ತಾಂತ್ರಿಕವಾಗಿ ಜಲಾಶಯ ಮತ್ತು ಕೆರೆಗಳಿಗೆ ಮೀನು ಮರಿ ಬಿಡಲಾಗುತ್ತಿದೆ ? (ವಿವರ ನೀಡುವುದು)

## ರಾಜ್ಯದ ಕಾಮಗಾರಿಗಳಲ್ಲಿ ಶಿಸ್ತು ತರಲು ಆಯೋಗ ರಚಿಸುವ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೧೭೦೩ (೨೦೦೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳಲ್ಲಿ ಸಂಪೂರ್ಣ ಶಿಸ್ತು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯಾವುದೇ ಕಾಮಗಾರಿಗಳಲ್ಲಿ cost over run, time over run, quality ಕೊರತೆಯ ಬಗ್ಗೆ ಸರ್ಕಾರ ಯಾವ ರೀತಿಯ ನಿಯಂತ್ರಣ ವ್ಯವಸ್ಥೆ ಹೊಂದಿದೆ ;

(ಇ) ರಾಜ್ಯದ ಕಾಮಗಾರಿಗಳಲ್ಲಿ ಶಿಸ್ತು ತರಲು ಕಾಮಗಾರಿ ನಿಯಂತ್ರಣ ಆಯೋಗ ರಚಿಸುವ ಬಗ್ಗೆ ಸರ್ಕಾರದ ಅಭಿಪ್ರಾಯಗಳೇನು ; ಈ ಬಗ್ಗೆ ಗುಣಾತ್ಮಕವಾಗಿ ಸರ್ಕಾರ ಚಿಂತನೆ ನಡೆಸುವುದೆ ?

## ಬೀದರ್ ಜಿಲ್ಲೆಯ ಪಶುಸಂಗೋಪನಾ ಇಲಾಖೆಯಲ್ಲಿರುವ ಗ್ರೂಪ್ 'ಡಿ' ಹುದ್ದೆಗಳ ನೇಮಕಾತಿ ಬಗ್ಗೆ

**ಶ್ರೀ ಚಂದ್ರಶೇಖರ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೧೭೦೪ (೨೦೭೭) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಪಶುಸಂಗೋಪನೆ ಇಲಾಖೆಯಲ್ಲಿರುವ ಗ್ರೂಪ್–ಡಿ ಹುದ್ದೆಗಳನ್ನು ಸರ್ಕಾರವು ನೇಮಕ ಮಾಡುವುದು ಯಾವಾಗ;

(ಆ) ಇಲ್ಲಿ ಗ್ರೂಪ್–ಡಿ ಹುದ್ದೆಯ ನೌಕರರಿಲ್ಲದೆ ಕಛೇರಿ ಕಾರ್ಯ ನಿರ್ವಹಣೆಯಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಪಶು ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು ; ಅವುಗಳ ನೇಮಕಾತಿ ಭರ್ತಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕುರಿ, ಆಡು ಮತ್ತು ಹಸು ಮರಣ ಹೊಂದಿದಾಗ ನೀಡುವ ಪರಿಹಾರದ ಬಗ್ಗೆ

**ಶ್ರೀ ಚಂದ್ರಶೇಖರ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೧೭೦೫ (೨೦೭೮) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ಯ ಸಿದ್ಧರಾಮಯ್ಯನವರು ಮುಖ್ಯಮಂತ್ರಿಯವರಿದ್ದಾಗ ಯಾವುದೇ ಸಮುದಾಯದವರಾದರೂ ಕುರಿ, ಆಡು, ಮೇಕೆ, ಮರಣ ಹೊಂದಿದಾಗ ಐದು ಸಾವಿರ ರೂಪಾಯಿಗಳನ್ನು ಹಾಗೂ

ಹಸು ಮರಣ ಹೊಂದಿದಾಗ ಹತ್ತು ಸಾವಿರ ರೂಪಾಯಿಗಳನ್ನು ಪರಿಹಾರವಾಗಿ ನೀಡುತ್ತಿದ್ದರು, ಆದರೆ ಈಗ ನೀಡದಿರಲು ಕಾರಣವೇನು ;

(ಆ) ಇದರಿಂದಾಗಿ ರೈತರಿಗೆ ಅನ್ಯಾಯವಾಗುತ್ತಿದ್ದು, ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ; ಮತ್ತು ಪರಿಹಾರ ನೀಡಲು ಕ್ರಮಕೈಗೊಳ್ಳಲಾಗುವುದೆ ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಬಾಕಿ ಇರುವ ಕಡತಗಳ ಕುರಿತು

**ಶ್ರೀ ಚಂದ್ರಶೇಖರ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೧೭೦೬ (೨೦೦೮) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಬಹಳಷ್ಟು ಕಡತಗಳು ವಿಲೇವಾರಿಯಾಗದೆ ಬಾಕಿ (Pending) ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಶೀಘ್ರವಾಗಿ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕಳೆದ ಒಂದು ವರ್ಷದಿಂದ ಪ್ರಸ್ತುತ ದಿನಾಂಕದವರೆಗೆ ವಿಲೇವಾರಿ ಮಾಡಿದ ಮತ್ತು ಬಾಕಿ ಇರುವ ಕಡತಗಳು ಎಷ್ಟು ; (ಕಡತಗಳ ಸಂಖ್ಯೆ, ವಿಷಯ ಮತ್ತು ಕೈಗೊಂಡ ಕ್ರಮಗಳ ಮಾಹಿತಿ ಸಹಿತ ದಾಖಲೆಗಳನ್ನು ನೀಡುವುದು)

(ಈ) ಕಳೆದ ಒಂದು ವರ್ಷದಲ್ಲಿ ಇಲಾಖೆಯ ಗ್ರೂಪ್ ಬಿ, ಸಿ, ಮತ್ತು ಡಿ ವೃಂದದ ವರ್ಗಾವಣೆ (ನೌಕರರ ಹೆಸರು,

ಕಾರ್ಯನಿರ್ವಹಿಸುತ್ತಿರುವ ಸ್ಥಳ, ವರ್ಗಾವಣೆಗೊಂಡ ಸ್ಥಳ, ಕರ್ತವ್ಯ ನಿರ್ವಹಿಸಿದ ಅವಧಿ ಮತ್ತು ವರ್ಗಾವಣೆಗೆ ಕಾರಣ ಸಹಿತ ಹಾಗೂ ವರ್ಗಾವಣೆ ಮಾಡಲಾದ ದಿನಾಂಕ ಸಹಿತ ವಿವರಗಳನ್ನು ನೀಡುವುದು)

(ಉ) ಕಡತ ಸಂಖ್ಯೆ 299 BET 2020 (1878740/2020) ಹಲವು ತಿಂಗಳುಗಳಿಂದ ವಿಲೆಗೆ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿಲೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಸದರಿ ಕಡತಕ್ಕೆ ಅನುಮೋದನೆ ನೀಡಿದ್ದಾರೆಯೇ, ನೀಡಿದ್ದಲ್ಲಿ, ಆದೇಶ ನೀಡಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ;

(ಋ) ಕಡತ ಇಷ್ಟು ದಿನ ಬಾಕಿ ಇರಲು ಕಾರಣವೇನು ; ಯಾವ ಯಾವ ಅಧಿಕಾರಿಗಳ ಬಳಿ ಎಷ್ಟು ದಿನಗಳವರೆಗೆ ಈ ಕಡತವಿತ್ತು; (ಮಾಹಿತಿ ನೀಡುವುದು) ಮತ್ತು (ಕಡತದ ಸಂಪೂರ್ಣ ದಾಖಲೆಯೊಂದಿಗೆ ಮಾಹಿತಿ ನೀಡುವುದು)

## ಕಲ್ಯಾಣ ಕರ್ನಾಟಕದಲ್ಲಿ ಆಗಿರುವ ಅತಿವೃಷ್ಠಿ ಕುರಿತು

**ಶ್ರೀ ಚಂದ್ರಶೇಖರ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೧೭೦೭ (೨೦೭೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ರೈತರು ಅತಿವೃಷ್ಠಿಯಿಂದ ತೊಂದರೆಗೀಡಾಗಿದ್ದು ಆ ಭಾಗದಲ್ಲಿ ಅತಿವೃಷ್ಠಿಯಿಂದ ಹಾನಿಗೊಳಗಾದ ಕ್ಷೇತ್ರಗಳ ಸಂಖ್ಯೆ ಎಷ್ಟು ;

(ಆ) ಎಷ್ಟು ಜನ ರೈತರಿಗೆ ಪರಿಹಾರ ನೀಡಲಾಗಿದೆ ; ಪರಿಹಾರ ನೀಡದೆ ಇರುವ ರೈತರ ಸಂಖ್ಯೆ ಮತ್ತು ಮೊತ್ತ ಎಷ್ಟು ;

(ಇ) ಉಳಿದ ಪರಿಹಾರ ಹಣವನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುತ್ತದೆ ;

(ಈ) ಇದಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಅಂಕಿ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು)

## ದೇವಸ್ಥಾನಗಳಿಗೆ ಅನುದಾನ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೦೮ (೨೦೬೬) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ಎಷ್ಟು ದೇವಸ್ಥಾನಗಳಿಗೆ ಕಳೆದ ಎರಡು ವರ್ಷಗಳಲ್ಲಿ ಅನುದಾನ ನೀಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಎಷ್ಟು ದೇವಸ್ಥಾನಗಳಿಗೆ ಅನುದಾನ ನೀಡಲು ಬಾಕಿ ಉಳಿದಿರುತ್ತದೆ; ಅವುಗಳಿಗೆ ಯಾವಾಗ ಅನುದಾನ ನೀಡಲಾಗುವುದು ;

(ಇ) ಹಲವಾರು ದೇವಸ್ಥಾನಗಳ ಆಡಳಿತ ಮಂಡಳಿಯವರು ಹಲವಾರು ವರ್ಷಗಳಿಂದ ಅನುದಾನಕ್ಕಾಗಿ ಬೇಡಿಕೆ ಸಲ್ಲಿಸುತ್ತಿದ್ದು, ಹೆಚ್ಚಿನ ಅನುದಾನವನ್ನು ಈ ಸಾಲಿನಲ್ಲಾದರೂ ಮಂಜೂರು ಮಾಡಲಾಗುವುದೇ ?

## ಅಸ್ಪೃಶ್ಯ ಜಾತಿಗಳಿಗೆ ಅನ್ಯಾಯ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭೯ (೨೦೬೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಹಲವಾರು ಜಾತಿಗಳನ್ನು ಸೇರಿಸಿದ್ದು ಇದರಿಂದ ನಿಜವಾದ ಅಸ್ಪೃಶ್ಯ ಜಾತಿಗಳಿಗೆ ಅನ್ಯಾಯವಾಗುತ್ತಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಸ್ಪೃಶ್ಯ ಜಾತಿಯವರಿಗೆ (Untouchables) ಆಗುತ್ತಿರುವ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುತ್ತದೆ ; ಇದಕ್ಕೇನಾದರೂ ಮಾರ್ಗೋಪಾಯಗಳಿವೆಯೇ ;

(ಇ) ಸಂವಿಧಾನ ತಜ್ಞ ಡಾ|| ಅಂಬೇಡ್ಕರ್ ಅವರ ಮೂಲ ಉದ್ದೇಶ ಅಸ್ಪೃಶ್ಯ ಜಾತಿಗಳವರಿಗೆ ಸಮಾಜದಲ್ಲಿ ನ್ಯಾಯ ದೊರಕಿಸಿಕೊಡಬೇಕೆಂಬುದಾಗಿದ್ದು ಅವರ ಆಶಯಕ್ಕೆ ವ್ಯತಿರಿಕ್ತವಾಗಿ ಈಗಿನ ಪರಿಸ್ಥಿತಿ ಇದ್ದು ಈ ಬಗ್ಗೆ ಸರ್ಕಾರ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದೇ ?

## ಗ್ರಾಮೀಣ ಜನರಿಗೆ ಹಸು, ಕುರಿ, ಎಮ್ಮೆ ನೀಡುವ ಯೋಜನೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧೦ (೨೦೬೫) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನೆ ಇಲಾಖೆಯ ವತಿಯಿಂದ ಗ್ರಾಮೀಣ ಜನರಿಗೆ ಎಮ್ಮೆ, ಹಸು, ಕುರಿಗಳನ್ನು ನೀಡುವ ಯೋಜನೆ ಜಾರಿಯಲ್ಲಿದೆಯೇ ;

(ಆ) ಇದ್ದರೆ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಜನರಿಗೆ ನೀಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಅವರುಗಳಲ್ಲಿ  ಪರಿಶಿಷ್ಟ ಜಾತಿ/ವರ್ಗದವರ ಸಂಖ್ಯೆ ಎಷ್ಟು ;

(ಈ) ಇವುಗಳನ್ನು ನೀಡಲು ನಿಗದಿಪಡಿಸಿರುವ ಮಾನದಂಡಗಳೇನು ? (ವಿವರ ನೀಡುವುದು)

## ಕೊಳಗೇರಿಗಳ ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗಳ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧೧ (೯೮೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಹಾಸನ ಜಿಲ್ಲೆಯ ಕೊಳಚೆ ಪ್ರದೇಶಗಳ ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆ ನಡೆಸಲಾಗಿದೆಯೇ; ನಡೆಸಿದ್ದಲ್ಲಿ, ಕಳೆದ ೩ ವರ್ಷಗಳ ಸಮೀಕ್ಷಾ ವರದಿ ನೀಡುವುದು ;

(ಆ) ಹಾಸನ ಜಿಲ್ಲೆಯಲ್ಲಿ ಎಷ್ಟು ಕೊಳಚೆ ಪ್ರದೇಶಗಳನ್ನು ಗುರುತಿಸಲಾಗಿದೆ ಮತ್ತು ಅವುಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಣೆ ಮಾಡಲು ನಿಯಮಾನುಸಾರ ಪ್ರಸ್ತಾವನೆಗಳನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ; ಸದರಿ ಪ್ರಸ್ತಾವನೆಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಕೊಳಗೇರಿಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಸಂಬಂಧ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಇದಕ್ಕಾಗಿ ಬಿಡುಗಡೆಯಾಗಿರುವ ಅನುದಾನವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಈ) ಹಾಸನ ಜಿಲ್ಲೆಯಲ್ಲಿ ಕೊಳಗೇರಿ ನಿವಾಸಿಗಳ ಆರೋಗ್ಯ ಮತ್ತು ಶುಚಿತ್ವ ಕಾಪಾಡುವ ಬಗ್ಗೆ ಅರಿವು ಮೂಡಿಸಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ; ಈ ಕಾರ್ಯಗಳಿಗಾಗಿ ಕಳೆದ ೩ ವರ್ಷಗಳಲ್ಲಿ ಖರ್ಚು ಮಾಡಿರುವ ಅನುದಾನವೆಷ್ಟು ? (ವಿವರಗಳನ್ನು ನೀಡುವುದು)

## ಗಂಗಾ ಕಲ್ಯಾಣ ಯೋಜನೆ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧೨ (೧೯೮೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಡಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊರೆಸಲಾದ ಕೊಳವೆ ಬಾವಿಗಳೆಷ್ಟು; ಇದಕ್ಕಾಗಿ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಆ) ಕೊರೆಸಲಾದ ಕೊಳವೆ ಬಾವಿಗಳಲ್ಲಿ ವಿಫಲವಾದ ಹಾಗೂ ಸಫಲವಾದ ಕೊಳವೆ ಬಾವಿಗಳೆಷ್ಟು; (ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಯೋಜನೆಯಲ್ಲಿ ಕೊರೆಸಿದ ಕೊಳವೆ ಬಾವಿಗಳಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ಮೋಟರ್ ಜೋಡಿಸಿ ವಿದ್ಯುಚ್ಛಕ್ತಿ ಒದಗಿಸಲಾಗಿದೆ; (ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಈ) ಉಳಿದ ಕೊಳವೆ ಬಾವಿಗಳಿಗೆ ಯಾವಾಗ ಮೋಟರ್ ಜೋಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ? (ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

## ಸಿ ಮತ್ತು ಡಿ ದರ್ಜೆ ಜಮೀನುಗಳ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧೩ (೧೯೯೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯ ಕಂದಾಯ ಇಲಾಖೆಯ ವ್ಯಾಪ್ತಿಗೆ ಒಳಪಡುವ 'ಸಿ' ಮತ್ತು 'ಡಿ' ದರ್ಜೆ ಜಮೀನುಗಳನ್ನು ಅರಣ್ಯೀಕರಣಕ್ಕಾಗಿ ಸಾಮಾಜಿಕ ಅರಣ್ಯ ಅಥವಾ ಪ್ರಾದೇಶಿಕ ಅರಣ್ಯ ವಿಭಾಗಗಳ ವಶಕ್ಕೆ ಪಡೆದಿರುವ ಪ್ರಕರಣಗಳು ಇವೆಯೇ ; ಇದ್ದಲ್ಲಿ, ಅಂತಹ ಪ್ರಕರಣಗಳ ವಿವರ ನೀಡುವುದು ;

(ಆ) ಸದರಿ ಜಮೀನುಗಳನ್ನು ಸರ್ಕಾರದ ಯಾವ ಆದೇಶದ ಮೇಲೆ ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆಗೆ ಪಡೆಯಲಾಗಿದೆ ? (ಆದೇಶಗಳ ಸಹಿತ ಸಂಪೂರ್ಣ ವಿವರ ನೀಡುವುದು)

## ರಸ್ತೆ ಕಾಮಗಾರಿ ಪ್ರಗತಿಯ ಕುರಿತ ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೪ (೨೦೧೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಬಿ.ಸಿ. ರೋಡ್–ಅಡ್ಡಹೊಳೆ ರಾಷ್ಟ್ರೀಯ ಹೆದ್ದಾರಿ ಎನ್.ಹೆಚ್–೭೫ ಕಾಮಗಾರಿಯು ಕಳೆದ ಎರಡು ವರ್ಷಗಳಿಂದ ಯಾವುದೇ ಪ್ರಗತಿ ಕಾಣದೇ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ರಸ್ತೆ ಕಾಮಗಾರಿಯನ್ನು ತ್ವರಿತವಾಗಿ ಮುಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಇದುವರೆಗೆ ಬಿಡುಗಡೆಯಾದ ಅನುದಾನವೆಷ್ಟು ? (ಗುತ್ತಿಗೆದಾರರ ವಿವರ, ಕಾಮಗಾರಿಯ ಪ್ರಗತಿಯ ಕುರಿತಂತೆ ಅಂಕಿ–ಅಂಶದೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

## ಪಹಣಿ ಪತ್ರ ದಾಖಲಿಸುವಲ್ಲಿ ವಿಳಂಬ/ಲೋಪದ ಕುರಿತು ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೧೫ (೨೦೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಪಹಣಿ ಪತ್ರವನ್ನು ದಾಖಲಿಸುವಾಗ ಸಿಬ್ಬಂದಿಯಿಂದಾದ ತಪ್ಪಿನಿಂದ ರೈತರಿಗೆ ತೊಂದರೆಯಾಗಿದ್ದು, ಸರಿಪಡಿಸುವಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಕಾಲಮಿತಿಯನ್ನು ವಿಧಿಸುವ ಮತ್ತು ವ್ಯವಸ್ಥೆಯನ್ನು ಸರಳೀಕೃತಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ರಾಷ್ಟ್ರೀಯ ಹೆದ್ದಾರಿಗಳ ಟೋಲ್‌ಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧೬ (೨೦೮೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಟೋಲ್‌ಗಳ ಸಂಖ್ಯೆ ಎಷ್ಟು ಅವು ಯಾವುವು ; ಇವುಗಳನ್ನು ಯಾವ ಕಂಪನಿಗಳು ನಿರ್ವಹಣೆ ಮಾಡುತ್ತಿವೆ ; (ಮಾಹಿತಿ ಒದಗಿಸುವುದು)

(ಆ) ಸದರಿ ಟೋಲ್‌ಗಳಲ್ಲಿ ಆಂಬುಲೆನ್ಸ್ ಮತ್ತು ವಿಐಪಿ ವಾಹನಗಳಿಗಾಗಿ ಪ್ರತ್ಯೇಕ ಪಥ ನಿರ್ಮಿಸಿದ್ದಾರೆಯೇ ;

(ಇ) ಸದರಿ ಟೋಲ್‌ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕನ್ನಡಿಗರ ಸಂಖ್ಯೆ ಎಷ್ಟು ;

(ಈ) ಆಂಬುಲೆನ್ಸ್ ಮತ್ತು ವಿಐಪಿ ವಾಹನಗಳಿಗೆ ಸರಿಯಾಗಿ ಪಥ ನಿರ್ವಹಣೆ ಮಾಡದೇ ಇರುವುದರಿಂದ, ಇದರಿಂದಾಗುವ ತೊಂದರೆಗಳನ್ನು ಸರ್ಕಾರ ಯಾವಾಗ ಪರಿಹರಿಸುವುದು ?

## ನಿರ್ಮಿತ ಕೇಂದ್ರಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧೭ (೨೦೮೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಿರ್ಮಿತ ಕೇಂದ್ರ ಎಂದರೇನು ; ಯಾವಾಗ ಸ್ಥಾಪನೆ ಮಾಡಲಾಯಿತು ; ರಾಜ್ಯದಲ್ಲಿ ಎಷ್ಟಿವೆ ; ಅವು ಯಾವುವು ; ಇವುಗಳ ಉದ್ದೇಶವೇನು ; (ವಿವರವಾದ ಮಾಹಿತಿ ಕೊಡುವುದು)

(ಆ) ಸದರಿ ಕೇಂದ್ರಗಳಿಂದ ಯಾವ ಯಾವ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗುತ್ತದೆ ; ಇದಕ್ಕೆ ಳಜಿ ವಿನಾಯಿತಿ ಇದೆಯೇ; (ವಿವರವಾಗಿ ಮಾಹಿತಿ ಒದಗಿಸುವುದು)

(ಇ) ತುಮಕೂರು ನಿರ್ಮಿತ ಕೇಂದ್ರವು ಕಳೆದ ನಾಲ್ಕು ವರ್ಷಗಳಿಂದ ಯಾವ ಯಾವ ಕಾಮಗಾರಿಗಳನ್ನು ತೆಗೆದುಕೊಂಡಿದೆ ; ಅವುಗಳಲ್ಲಿ ಯಾವ ಕಾಮಗಾರಿಗಳು ಮುಗಿಸಿವೆ ; ಯಾವ ಕಾಮಗಾರಿಗಳು ಬಾಕಿ ಇವೆ ? (ವಿವರವಾಗಿ ವರ್ಷವಾರು ಮಾಹಿತಿ ನೀಡುವುದು)

## ಅಕ್ರಮವಾಗಿ ನೋಂದಾವಣಿ ಮಾಡಿರುವ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧೮ (೨೦೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೊಡ್ಡಬಳ್ಳಾಪುರ ತಾಲ್ಲೂಕು ಕಸಬಾ ಹೋಬಳಿ ತಿಮ್ಮಸಂದ್ರ ಗ್ರಾಮಕ್ಕೆ ಸೇರಿದ್ದ ಸರ್ವೆ ನಂ.೪೬ರಲ್ಲಿ ಮೂರು ಎಕರೆ ೧೮ ಗುಂಟೆ ಹಾಗೂ ಸರ್ವೆ ನಂಬರ್ ೪೭ ಎರಡು ಎಕರೆ ೧೪ ಗುಂಟೆ ಜಮೀನಿಗೆ ಸಂಬಂಧಿಸಿದಂತೆ ೨೦೦೧ ನೇ ಸಾಲಿನ ಅವಧಿಯಲ್ಲಿ ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ ರಾಜಘಾಟ್ ಶಾಖೆ, ಇಲ್ಲಿ ಅಡಮಾನ ಕೃಷಿ (ದ್ರಾಕ್ಷಿ) ಸಾಲ ಪಡೆದಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಸದರಿ ಜಮೀನನ್ನು ಸಾಲ ನೀಡಿದ ಬ್ಯಾಂಕಿನ ಹೆಸರಿಗೆ ನೋಂದಣಾಧಿಕಾರಿ ಕಛೇರಿಯಲ್ಲಿ ನೋಂದಣಿ ಮಾಡಿದ್ದಾರೆಯೇ ; ಮಾಡಿದ್ದಲ್ಲಿ, ಯಾವ ದಿನಾಂಕದಂದು ನೋಂದಣಿಯಾಗಿದೆ ; (ವಿವರ ಒದಗಿಸುವುದು)

(ಇ) ಸದರಿ ಸ್ವತ್ತು ಬ್ಯಾಂಕಿನ ಹೆಸರಿಗೆ ಅಡಮಾನ ನೋಂದಣಿಯಾಗಿದ್ದರು ಸಹ ದೊಡ್ಡಬಳ್ಳಾಪುರ ಉಪನೋಂದಣಾಧಿಕಾರಿ ಅವರ ಕಛೇರಿಯಲ್ಲಿ ಬೇರೆ ಬೇರೆಯವರ ಹೆಸರಿಗೆ ಕ್ರಯ ನೋಂದಣಿ ಮಾಡಿದ್ದು, ನಿಜವೇ ; ಹಾಗಿದ್ದಲ್ಲಿ, ಸದರಿ ನೋಂದಣಿ ಪ್ರಕ್ರಿಯೆ ಕಾನೂನುಬಾಹಿರ ಅಲ್ಲವೇ ;

(ಈ) ಕಾನೂನುಬಾಹಿರ ಕ್ರಯ ಮಾಡಿರುವುದಕ್ಕೆ ದಿನಾಂಕ: ೧೯.೧.೨೦೦೫ ರಂದು ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ, ರಾಜಘಾಟ್ ಶಾಖೆಯವರ ಆಕ್ಷೇಪಣೆ ವ್ಯಕ್ತಪಡಿಸಿ ಉಪ ನೋಂದಣಾಧಿಕಾರಿ, ದೊಡ್ಡಬಳ್ಳಾಪುರ ಇವರಿಗೆ ಪತ್ರ ಬರೆದಿರುವುದು ನಿಜವೇ ; (ಪತ್ರದ ಪ್ರತಿಯನ್ನು ಒದಗಿಸುವುದು)

(ಉ) ಕಾನೂನುಬಾಹಿರವಾಗಿ ಕ್ರಯ ನೋಂದಣಿಯಾದ ಸದರಿ ಸ್ವತ್ತಿನ ನೋಂದಣಿ ಪ್ರಕ್ರಿಯೆಯನ್ನು ರದ್ದುಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಯಾವ ಕಾಲಮಿತಿಯೊಳಗಡೆ ಕ್ರಮ ಜರುಗಿಸಲಾಗುವುದು ?

## ಖಾಸಗಿ ವಸತಿ ಶಾಲೆಗಳನ್ನು ತೆರೆಯಲು ಇರುವ ನಿಯಮಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭೯ (೨೦೫೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ವಸತಿ ಶಾಲೆಗಳಿಗೆ ಅನುಮತಿ ನೀಡಲು ನಿಯಮಾವಳಿಗಳಲ್ಲಿ ಅವಕಾಶವಿದೆಯೇ ;

(ಆ) ರಾಜ್ಯದಲ್ಲಿ ಖಾಸಗಿ ವಸತಿ ಶಾಲೆಗಳು ಇಲಾಖೆಯ ಅನುಮತಿ ಪಡೆದು ನಡೆಯುತ್ತಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಯಾವ ಸ್ಥಳಗಳಲ್ಲಿ ಖಾಸಗಿ ವಸತಿ ಶಾಲೆಗಳು ನಡೆಯುತ್ತಿವೆ ; (ವಿವರ ನೀಡುವುದು)

(ಈ) ಧಾರವಾಡದಲ್ಲಿ ೮ ರಿಂದ ೧೦ನೇ ತರಗತಿ ವರೆಗೆ ಖಾಸಗಿ ಶಾಲೆ ನಡೆಸಲು ೨೦೧೨–೧೩ನೇ ಸಾಲಿನಲ್ಲಿ ಆಯುಕ್ತಾಲಯವು ಅನುಮತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ನಿಯಮಾವಳಿಗಳಲ್ಲಿ ಅವಕಾಶವಿಲ್ಲದಿದ್ದರೂ ಖಾಸಗಿ ಶಾಲೆಗಳಿಗೆ ಅನುಮತಿ ನೀಡಿದ ಅಧಿಕಾರಿಗಳ ವಿರುದ್ಧ ಸರ್ಕಾರ ಶಿಸ್ತಿನ ಕ್ರಮ ಕೈಗೊಳ್ಳಲಿದೆಯೇ ;

(ಊ) ನಿಯಮಾವಳಿಗಳಲ್ಲಿ ಅವಕಾಶವಿರದಿದ್ದರೂ ನಡೆಯುತ್ತಿರುವ ಧಾರವಾಡದಲ್ಲಿನ ಖಾಸಗಿ–ವಸತಿ ಶಾಲೆಗಳ ಪರವಾನಗಿ ಅನುಮತಿ ರದ್ದುಪಡಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆಯೇ ;

(ಋ) ಈ ಕುರಿತು ಯಾವ ಕಾಲಮಿತಿಯಲ್ಲಿ ಕ್ರಮಕೈಗೊಳ್ಳಲಾಗುವುದೇ ?

## ರಾಜ್ಯದ ಗೋಶಾಲೆಗಳಲ್ಲಿ ನೀರು ಮತ್ತು ಆಹಾರಕ್ಕೆ ಕೊರತೆ ಉಂಟಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨೦ (೨೦೭೧) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೋಹತ್ಯೆ ನಿಷೇಧ ಕಾಯ್ದೆಯಿಂದಾಗಿ ರಾಜ್ಯದಲ್ಲಿನ ಗೋಶಾಲೆಗಳಲ್ಲಿ ಗೋವುಗಳ ಸಂಖ್ಯೆ ಹೆಚ್ಚುತ್ತಿದ್ದು, ನೀರು ಮತ್ತು ಆಹಾರಕ್ಕೆ ಕೊರತೆಯಿರುವುದೆಂಬ ವರದಿಯನ್ನು ಸರ್ಕಾರ ಗಮನಿಸಿದೆಯೇ ;

(ಆ) ಕಳೆದ ೨ ವರ್ಷಗಳಲ್ಲಿ ಸರ್ಕಾರವು ರಾಜ್ಯದ ಗೋಶಾಲೆಗಳಿಗೆ ನೀಡಿರುವ ನಿರ್ವಹಣಾ ವೆಚ್ಚವೆಷ್ಟು ; (ಮಾಹಿತಿ ನೀಡುವುದು )

(ಇ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಗೋಶಾಲೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು )

(ಈ) ರಾಜ್ಯದಲ್ಲಿ ಜಾನುವಾರುಗಳ ಗಣತಿ ನಡೆಸುವ ಯೋಜನೆ ಸರ್ಕಾರಕ್ಕಿದೆಯೇ ?

## "ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉಪ ಯೋಜನೆ" ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨೧ (೨೦೬೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಇರುವ "ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಉಪ ಯೋಜನೆ" (SCP/TSP) ಯೋಜನೆಯು ಪೂರ್ಣ ಪ್ರಮಾಣದಲ್ಲಿ ಸದ್ಬಳಕೆಯಾಗುತ್ತಿಲ್ಲವೆಂಬ ವರದಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ಸದರಿ ಯೋಜನೆಯಡಿ ಬಿಡುಗಡೆಗೊಂಡ ಅನುದಾನವೆಷ್ಟು ;

(ಇ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ಸದರಿ ಯೋಜನೆಯಡಿ ಖರ್ಚು ಮಾಡಲಾದ ಅನುದಾನ ಎಷ್ಟು ;

(ಈ) ಕಳೆದ ಎರಡು ವರ್ಷಗಳ ಅವಧಿಗೆ ಬೆಳಗಾವಿ ಜಿಲ್ಲೆಗೆ ಸದರಿ ಯೋಜನೆಯಡಿ ಬಿಡುಗಡೆಗೊಂಡ ಮತ್ತು ಬಳಕೆಯಾದ ಅನುದಾನವೆಷ್ಟು ? (ಮಾಹಿತಿ ನೀಡುವುದು)

## ಮುಜರಾಯಿ ಇಲಾಖೆಗಳಿಗೊಳಪಡುವ ದೇವಸ್ಥಾನಗಳಲ್ಲಿ ಮೂಲ ವ್ಯವಸ್ಥೆ ಕಲ್ಪಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨೨ (೨೦೧೯) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳಿಂದ ಕೋಟ್ಯಾಂತರ ರೂಪಾಯಿ ಆದಾಯ ಸರ್ಕಾರಕ್ಕೆ ಸಂದಾಯ ವಾಗುತ್ತಿದ್ದರೂ ಕೂಡ ಆ ದೇವಸ್ಥಾನಗಳಿಗೆ ಮೂಲ ಸೌಲಭ್ಯ ಕಲ್ಪಿಸುವಲ್ಲಿ ವಿಳಂಭ ದೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳು ಎಷ್ಟು; ಅವು ಯಾವುವು ; ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ದೇವಸ್ಥಾನಗಳು ಈ ಇಲಾಖೆಗೆ ಒಳಪಡುತ್ತವೆ ;

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಎ,ಬಿ,ಸಿ ದೇವಸ್ಥಾನಗಳಿಂದ ಸರ್ಕಾರಕ್ಕೆ ಯಾವ್ಯಾವ ದೇವಸ್ಥಾನಗಳಿಂದ ಎಷ್ಟೆಷ್ಟು ಆದಾಯ ಬಂದಿದೆ ; ಅದರಲ್ಲಿ ಬೆಳಗಾವಿ ಜಿಲ್ಲೆಯ ಯಾವ್ಯಾವ ದೇವಸ್ಥಾನಗಳಿಂದ ಎಷ್ಟು ಆದಾಯ ಬಂದಿರುತ್ತದೆ ; (ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಯಾವ್ಯಾವ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಅದರಲ್ಲಿ ಬಳಕೆಯಾದ ಅನುದಾನವೆಷ್ಟು ; ಬಳಕೆಯಾಗದೇ ಇರುವ ಅನುದಾನವೆಷ್ಟು ; (ವಿವರ ಒದಗಿಸುವುದು)

(ಉ) ಹಿಂದೂ ದೇವಾಲಯಗಳನ್ನು ಸರ್ಕಾರ ಮೇಲ್ವಿಚಾರಣೆ ಮಾಡುವಂತೆ ಮಸೀದಿಗಳನ್ನು, ಚರ್ಚ್‌ಗಳನ್ನು ತನ್ನ ಇಲಾಖೆಯಡಿ ತಂದು ನಿರ್ವಹಣೆ ಮಾಡುವ ಚಿಂತನೆ ಸರ್ಕಾರಕ್ಕಿದೆಯೇ ; (ವಿವರ ಒದಗಿಸುವುದು)

(ಊ) ಮಸೀದಿ, ಚರ್ಚ್‌ಗಳಿಂದ ಬರುವ ಆದಾಯ ಎಷ್ಟು ; ಯಾವ ಯಾವ ಮೂಲಗಳಿಂದ ಆದಾಯ ಬರುತ್ತದೆ ; ಹಾಗೂ ಆದಾಯ ವಿನಿಯೋಗಿಸುತ್ತಿರುವುದು ಹೇಗೆ ? (ವಿವರ ಒದಗಿಸುವುದು )

## ಸರ್ಕಾರಿ ಕಛೇರಿಗಳಲ್ಲಿ ಹಳೆಯ ಕಡತಗಳ ಸಂರಕ್ಷಣೆಗೆ ಇರುವ "ಸುರಭಿ ಯೋಜನೆ" ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨೩ (೨೦೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಕಛೇರಿಗಳಲ್ಲಿರುವ ಹಳೆಯ ಕಡತಗಳ ಸಂರಕ್ಷಣೆಗೆ ಇರುವ "ಸುರಭಿ ಯೋಜನೆ"ಯ ಅನುಷ್ಠಾನದ ಪ್ರಯತ್ನ ನಡೆದಿದೆಯೇ ;

(ಆ) ರಾಜ್ಯದ ಅನೇಕ ಉಪ–ನೋಂದಣಾಧಿಕಾರಿಗಳ ಕಛೇರಿಗಳಲ್ಲಿ ದಾಖಲೆ ಕೋರಿರುವ ಸಾಮಾನ್ಯ ಜನಗಳಿಗೆ ಸೂಕ್ತ ದಾಖಲೆ ನೀಡುವಲ್ಲಿ ಆಗುತ್ತಿರುವ ವಿಳಂಬ ತಡೆಯಲು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಸುರಭಿ ಯೋಜನೆಯಡಿಯಲ್ಲಿ ಅಳವಡಿಸಿಕೊಂಡಿರುವ ಇಲಾಖೆಗಳು ಯಾವುವು ; (ವಿವರ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ಸುರಭಿ ಯೋಜನೆಯನ್ನು ಅನುಷ್ಠಾನಕ್ಕೆ ತರಲಾಗಿದೆಯೇ ? (ಇಲಾಖಾವಾರು ಮಾಹಿತಿ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದ ನಿಗಮ/ ಮಂಡಳಿಗಳಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೭೨೪ (೨೦೦೦) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ ಎಷ್ಟು ನಿಗಮ/ಮಂಡಳಿಗಳು ಕಾರ್ಯನಿರ್ವಹಿಸುತ್ತಿವೆ ; ಸದರಿ ನಿಗಮ/ ಮಂಡಳಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ವಿವರ ನೀಡುವುದು)

(ಆ) ಅವುಗಳಲ್ಲಿ, ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಲು ಕ್ರಮಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೇ ; ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು ;

(ಉ) ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು ?

## ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳ ಸಹ ಶಿಕ್ಷಕರುಗಳ ಸಮಸ್ಯೆಗಳನ್ನು ನಿವಾರಿಸುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೭೨೫ (೨೦೩೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ಸಂಘದ ಖಾಯಂ ಸಿಬ್ಬಂದಿಗಳಿಗೆ ಮಾನ್ಯ ಉಚ್ಚ ನ್ಯಾಯಾಲಯ, ಧಾರವಾಡ ಪೀಠ ಮತ್ತು ಸರ್ಕಾರವು ಜಾರಿ ಮಾಡಿದ ಅದೇಶದಂತೆ ವಸತಿ ಶಾಲಾ ನೌಕರರಿಗೆ ಮುಂಬಡ್ತಿ ನೀಡಲು ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು ;

(ಆ) ಕರ್ನಾಟಕ ನಾಗರಿಕ ಸೇವಾ ನಿಯಮ–೧೯೫೭ರ ಸೇವಾ ಜೇಷ್ಠತಾ ನಿಯಮಗಳು ಕ್ರೈಸ್ ನೌಕರರಿಗೆ ಅನ್ವಯಿಸುತ್ತವೆಯೇ ; (ವಿವರ ನೀಡುವುದು)

(ಇ) ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳ ಸಹ ಶಿಕ್ಷಕರುಗಳ ಜೇಷ್ಠತಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗಿದೆಯೇ ; ಇಲ್ಲವಾದಲ್ಲಿ, ಜೇಷ್ಠತಾ ಪಟ್ಟಿ ತಯಾರಿಸುವಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಈ) ಶಿಕ್ಷಣ ಇಲಾಖೆಯ ಸಹ ಶಿಕ್ಷಕರುಗಳಿಗೆ ಬಡ್ತಿ ನೀಡುವಂತೆ ಜೇಷ್ಠತಾ ಪಟ್ಟಿಯ ಅನುಸಾರ ಸದರಿ ಸಹ ಶಿಕ್ಷಕರುಗಳಿಗೆ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡುವುದಕ್ಕೆ ಸರ್ಕಾರ ಏನಾದರೂ ಕ್ರಮಕೈಗೊಂಡಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

ಉ) ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳಿಗೆ ಪ್ರತಿಶತ ಹುದ್ದೆಗಳನ್ನು ಮೀಸಲಿರಿಸಿ, ಸಹ ಶಿಕ್ಷಕರುಗಳನ್ನು ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡಲಾಗುವುದೇ ?

## ವಸತಿ ಶಿಕ್ಷಣ ಸಂಸ್ಥೆಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೭೨೬ (೨೦೮೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಾಲಾ/ಕಾಲೇಜುಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಶಾಲಾ/ಕಾಲೇಜುಗಳಿಗೆ ಇರುವ ಸ್ವಂತ ಕಟ್ಟಡಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡಗಳಿಲ್ಲದಿರುವ ಶಾಲಾ/ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಮೇಲ್ಕಂಡ ಶಾಲಾ/ಕಾಲೇಜುಗಳ ನಿರ್ವಹಣೆಗಾಗಿ ದುರಸ್ತಿಗಾಗಿ ಕಳೆದ ಐದು ವರ್ಷಗಳಲ್ಲಿ ಸರ್ಕಾರ ಬಿಡುಗಡೆ ಮಾಡಿರುವ ಹಣದ ಮೊತ್ತ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಈ) ಈ ಶಾಲಾ/ಕಾಲೇಜುಗಳ ನಿರ್ವಹಣೆ, ದುರಸ್ತಿಗಳು ಕಳಪೆ ಕಾಮಗಾರಿ/ಇನ್ನಿತರೆ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಬಂದಿದ್ದರೆ ವಿವರಗಳನ್ನು ನೀಡುವುದು)

(ಉ) ಮೇಲ್ಕಂಡ ಕಳಪೆ ಕಾಮಗಾರಿಗಳು/ದುರಸ್ತಿಗಳು/ನಿರ್ವಹಣೆಗಳಲ್ಲಿ ಭಾಗಿಯಾಗಿರುವ ಗುತ್ತಿಗೆದಾರರು ಯಾರು; "ಕ್ರೈಸ್" ಸಂಸ್ಥೆಯ ಅಧಿಕಾರಿಗಳು ಯಾರು ; ಮೇಲ್ಕಂಡ ಗುತ್ತಿಗೆದಾರರು/ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕ್ರೈಸ್ ಅಡಿಯಲ್ಲಿನ ಶಾಲಾ ಕಾಲೇಜುಗಳ ಮಾಹಿತಿ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೭೨೭ (೨೦೮೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸವಾಜ ಕಲ್ಯಾಣ ಇಲಾಖೆಯ "ಕ್ರೈಸ್" ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲಾ/ಕಾಲೇಜುಗಳ ಸಂಸ್ಥೆ ಎಷ್ಟು; ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಪದನಾಮವಾರು ವಿವರಗಳನ್ನು ನೀಡುವುದು)

(ಆ) ಮೇಲ್ಕಂಡ ಸಿಬ್ಬಂದಿಯಲ್ಲಿ ಖಾಯಂ/ಹೊರಗುತ್ತಿಗೆ/ಜಿಲ್ಲಾ ಪಂಚಾಯ್ತಿ ಅಡಿಯಲ್ಲಿ ನೇಮಕಗೊಂಡ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಇ) ಹಾಲಿ ಖಾಯಂ ಸಿಬ್ಬಂದಿಗಳು ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಶಿಕ್ಷಣ ಇಲಾಖೆಯ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರು/ಉಪನ್ಯಾಸಕರುಗಳಿಗೆ ನೀಡಲಾಗುತ್ತಿರುವ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಈ ತಾರತಮ್ಯ ನಿವಾರಣೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ಈ ಸೌಲತ್ತುಗಳನ್ನು ಖಾಯಂ ಸಿಬ್ಬಂದಿಗಳಿಗೆ ನೀಡಲಾಗುವುದು ?

## ಹೆಬ್ಬಾಳ ವಿಧಾನ ಸಭಾ ಕ್ಷೇತ್ರದ ವಸತಿಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೭೨೮ (೨೦೮೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಹೆಬ್ಬಾಳ ವಿಧಾನ ಸಭಾ ಕ್ಷೇತ್ರಕ್ಕೆ ೨೦೧೮ ರಿಂದ ಈಚೆಗೆ ಮಂಜೂರು ಮಾಡಿರುವ ಮನೆಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಆ) ಈ ಮನೆಗಳ ನಿರ್ಮಾಣಕ್ಕೆ ಸರ್ಕಾರ ಬಿಡುಗಡೆ ಮಾಡಲಾಗಿರುವ ಮೊತ್ತ ಎಷ್ಟು ;

(ಇ) ಯಾವ ಯಾವ ಯೋಜನೆಗಳ ಅಡಿಯಲ್ಲಿ ಈ ಯೋಜನೆಗಳನ್ನು ನಿರ್ಮಿಸಲಾಗುತ್ತಿದೆ ? (ವಿವರಗಳನ್ನು ವಾರ್ಡ್‌ವಾರು ನೀಡುವುದು)

## ಕೋಲಾರ ಜಿಲ್ಲೆಯ ರಸ್ತೆಗಳ ಬಗ್ಗೆ

**ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೭೨೯ (೨೦೮೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯ, ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿರುವ ರಸ್ತೆಗಳ ಉದ್ದ ಎಷ್ಟು ; ಅವು ಯಾವುವು ;

(ಆ) ಬಂಗಾರಪೇಟೆಯಿಂದ ಶ್ರೀನಿವಾಸಪುರ ತಾಲ್ಲೂಕಿನ ಆಂಧ್ರದ ಗಡಿಯವರಿಗೆ ಹಾದು ಹೋಗುವ ರಾಜ್ಯದ ಹೆದ್ದಾರಿಯ ಉದ್ದ ಹಾಗೂ ಅಗಲ ಎಷ್ಟು ; ಅದನ್ನು ಯಾವ ಯೋಜನೆ ಅಡಿಯಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ ; ಇದಕ್ಕೆ ಮಾಡಲಾದ ವೆಚ್ಚ ಎಷ್ಟು; (ಈ ಕಾಮಗಾರಿಯನ್ನು ನಿರ್ವಹಿಸಿದ ಗುತ್ತಿಗೆದಾರರ ವಿವರಗಳನ್ನು ನೀಡುವುದು)

(ಇ) ಈ ರಸ್ತೆಯು ಕಳಪೆ ಕಾಮಗಾರಿಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ವಿವರಗಳನ್ನು ನೀಡುವುದು ಹಾಗೂ ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಾಶಾಸನದ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೭೩೦ (೨೦೮೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮನೆಬಾಗಿಲಿಗೆ "ಮಾಶಾಸನ" ಯೋಜನೆ ಕಂದಾಯ ಇಲಾಖೆಯಲ್ಲಿ ಜಾರಿಗೆ ಬಂದಿದ್ದು ಯಾವಾಗಿನಿಂದ ;

(ಆ) ಈ ಯೋಜನೆ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆಯೇ ;

(ಇ) ಈ ಯೋಜನೆಯ ಫಲಾನುಭವಿಗಳಿಗೆ ನೀಡಲಾಗುತ್ತಿರುವ ಮಾಶಾಸನ ಎಷ್ಟು ;

(ಈ) ಈ ಯೋಜನೆಗೆ ಸರ್ಕಾರದಿಂದ ವಾರ್ಷಿಕವಾಗಿ ವೆಚ್ಚ ಮಾಡುತ್ತಿರುವ ಹಣ ಎಷ್ಟು ?

## ರಾಜ್ಯದಲ್ಲಿ ಮತ್ಸ್ಯಾಹಾರವನ್ನು ಜನಪ್ರಿಯಗೊಳಿಸಿ, ವಿಸ್ತರಿಸುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೧ (೧೯೯೯) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೀನುಗಾರಿಕಾ ವಲಯವನ್ನು ಅಭಿವೃದ್ಧಿಗೊಳಿಸುವ ಹಾಗೂ ಮತ್ಸ್ಯಾಹಾರವನ್ನು ಜನಪ್ರಿಯಗೊಳಿಸಲು ಮೀನುಗಾರಿಕೆ ಅಭಿವೃದ್ಧಿ ನಿಗಮವು ಹಮ್ಮಿಕೊಂಡಿರುವ ಕ್ರಿಯಾ ಯೋಜನೆಗಳು ಯಾವುವು ;

(ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ನಿಗಮದ ಯೋಜನೆಯ ಸೌಲಭ್ಯಗಳನ್ನು ನೀಡಿ ಪ್ರೋತ್ಸಾಹಿಸಲಾಗಿದೆ ;

(ಇ) ಮೀನುಗಾರಿಕಾ ವಲಯವನ್ನು ಅಭಿವೃದ್ಧಿಪಡಿಸಲು ಸರ್ಕಾರ ಮೀಸಲಿಟ್ಟಿರುವ ಅನುದಾನ ಎಷ್ಟು ;

(ಈ) ಮಹಾನಗರ ಪ್ರದೇಶಗಳಲ್ಲಿ ಜನಪ್ರಿಯತೆಯನ್ನು ಗಳಿಸಿಕೊಂಡಿರುವ ನಿಗಮದ ಮತ್ಸ್ಯದರ್ಶಿನಿ ಹೋಟೆಲ್‌ಗಳನ್ನು ಬೇಡಿಕೆ ಇರುವ ಜಿಲ್ಲಾ ಕೇಂದ್ರಗಳಲ್ಲಿ ಪ್ರಾರಂಭಿಸುವ ಬಗೆಗಿನ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಇದ್ದಲ್ಲಿ, ನಿಗಮದ ಮೂಲಕ ಮತ್ಸ್ಯೋತ್ಪನ್ನಗಳನ್ನು ಜನಪ್ರಿಯಗೊಳಿಸುವ ಹಾಗೂ ಆಸಕ್ತರಿಗೆ ಉದ್ಯೋಗ ಕಲ್ಪಿಸಿಕೊಡುವಲ್ಲಿ ನೆರವಾಗುವ ಸರಳ ಯೋಜನೆಗಳಾವುವು ? (ವಿವರ ನೀಡುವುದು)

## ಮುಜರಾಯಿ ಇಲಾಖೆಯ ವ್ಯಾಪ್ತಿಗೊಳಪಡುವ ದೇವಸ್ಥಾನಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೨ (೧೯೯೭) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯಡಿಯಲ್ಲಿರುವ ಒಟ್ಟು ದೇವಸ್ಥಾನಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ದೇವಸ್ಥಾನಗಳ ವಿವಿಧ ಮೂಲಗಳಿಂದ ಸಂಗ್ರಹಿಸಿದ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ದೇವಸ್ಥಾನಗಳಿಂದ ಸಂಗ್ರಹಿಸಿದ ಹಣವನ್ನು ಸರ್ಕಾರ ಬೇರೆ ಯೋಜನೆಗಳಿಗೆ ಬಳಸಿಕೊಳ್ಳುತ್ತಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಯೋಜನೆಗಳಿಗೆ ಉಪಯೋಗಿಸಿಕೊಳ್ಳುತ್ತಿದೆ ;

(ಈ) ಈ ದೇವಸ್ಥಾನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಉ) ಮುಜರಾಯಿ ಇಲಾಖೆ ಅಡಿಯಲ್ಲಿ ಬರುವ ಪುರಾತನ ದೇವಸ್ಥಾನಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ ;

(ಊ) ರಾಜ್ಯದಲ್ಲಿ ಮುಜರಾಯಿ ಇಲಾಖೆ ಅಡಿಯಲ್ಲಿ ಬರುವ ಒಟ್ಟು ದೇವಸ್ಥಾನಗಳ ಪೈಕಿ ಇದುವರೆಗೂ ಎಷ್ಟು ದೇವಸ್ಥಾನಗಳನ್ನು ಅಭಿವೃದ್ಧಿಪಡಿಸಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ವಿವಿಧ ಯೋಜನೆಯಡಿ ಮಂಜೂರಾದ ಕೊಳವೆ ಬಾವಿಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೩ (೧೬೨೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ವಿವಿಧ ಯೋಜನೆಗಳಡಿ ಮಂಜೂರಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮಂಜೂರಾದ ಕೊಳವೆ ಬಾವಿಗಳನ್ನು ಅನುಷ್ಠಾನಗೊಳಿಸಲು ಇರುವ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ವಿದ್ಯುತ್ ಸಂಪರ್ಕವೂ ಒಳಗೊಂಡಂತೆ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಂಡಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ? (ವರ್ಷವಾರು ಮಾಹಿತಿ ನೀಡುವುದು )

## ಗೋಹತ್ಯೆ ನಿಷೇಧ ಕಾಯ್ದೆಯಡಿ ಗಂಡು-ಕರುಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೩೪ (೧೯೮) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗೋಹತ್ಯೆ ನಿಷೇಧ ಕಾಯ್ದೆ ಕಾನೂನು ಜಾರಿಗೆ ಬಂದ ನಂತರ ಹೈನುಗಾರಿಕೆಯಲ್ಲಿ ತೊಡಗಿರುವ ರೈತರು ಗಂಡು ಕರುಗಳನ್ನು ಹುಟ್ಟಿದ ತಕ್ಷಣ ತಾಯಿಯಿಂದ ಬೇರ್ಪಡಿಸಿ, ಗೋಶಾಲೆಗಳ ಮುಂದೆ ಮತ್ತು ಅರಣ್ಯಗಳಲ್ಲಿ ಬಿಟ್ಟು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕರುಗಳನ್ನು ನಿರ್ವಹಣೆ ಮಾಡಲು ರೈತರಿಗೆ ಪ್ರತಿದಿನ ೧೫೦ ರಿಂದ ೨೦೦ ರೂಪಾಯಿಗಳವರೆಗೆ ವೆಚ್ಚವಾಗುತ್ತಿದ್ದು, ರೈತರಿಗೆ ಸರ್ಕಾರದಿಂದ ಗಂಡು ಕರುಗಳ ನಿರ್ವಹಣೆಗೆ ಪ್ರೋತ್ಸಾಹ ಧನ ನೀಡಲಾಗುತ್ತಿದೆಯೇ ;

(ಇ) ರಾಜ್ಯದಲ್ಲಿ ಗೋಹತ್ಯೆ ನಿಷೇಧ ಕಾಯ್ದೆ ಜಾರಿಗೆ ಬಂದ ನಂತರ ಎಷ್ಟು ಕರುಗಳನ್ನು ಗೋಶಾಲೆಗಳಿಗೆ ಬಿಡಲಾಗಿದೆ ; ಸರ್ಕಾರದಿಂದ ಎಷ್ಟು ಗೋಶಾಲೆಗಳನ್ನು ಕರುಗಳ ನಿರ್ವಹಣೆಗಾಗಿ ತೆರೆಯಲಾಗಿದೆ ? (ಮಾಹಿತಿ ನೀಡುವುದು)

## ಸೂರತ್ಕಲ್–ಕುಂದಾಪುರ ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ಕಾಮಗಾರಿಯ ಅವ್ಯವಸ್ಥೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೫ (೨೦೭೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸೂರತ್ಕಲ್‌ನಿಂದ ಕುಂದಾಪುರ ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ಕಾಮಗಾರಿಯನ್ನು ಪ್ರಾರಂಭಿಸಲಾಗಿದ್ದು ಯಾವಾಗ ; ಅಂದಾಜು ಮೊತ್ತವೆಷ್ಟು; ಈ ಯೋಜನೆಯಲ್ಲಿ ಪೂರ್ಣಗೊಳಿಸಿದ ಕಾಮಗಾರಿಗಳು ಯಾವುವು ; ಬಾಕಿಯಿರುವ ಕಾಮಗಾರಿಗಳು ಯಾವುವು ;

(ಆ) ಈ ಹೆದ್ದಾರಿಯಲ್ಲಿರುವ ಟೋಲ್ ಕೇಂದ್ರಗಳ ಸಂಖ್ಯೆ ಎಷ್ಟು ; ಈ ಟೋಲ್ ಕೇಂದ್ರಗಳಲ್ಲಿರುವ ಮೂಲ ಸೌಕರ್ಯಗಳು ಯಾವುವು ; ಅವುಗಳಲ್ಲಿ ಸಿಬ್ಬಂದಿಗಳ ನಿಯಂತ್ರಣಕ್ಕಾಗಿ ಸರ್ಕಾರದ ಕ್ರಮವೇನು ;

(ಇ) ಉಡುಪಿ ಜಿಲ್ಲೆಯ ಬ್ರಹ್ಮಾವರ (ಆಕಾಶವಾಣಿ ಜಂಕ್ಷನ್ ಬಳಿ) ಬ್ರಹ್ಮಾವರ ಜನ್ನಾಡಿ ರಸ್ತೆಯ ಕೂಡುಭಾಗದಲ್ಲಿ ಅವೈಜ್ಞಾನಿಕ ಕಾಮಗಾರಿ ನಡೆದಿರುವುದರಿಂದ ಅಪಘಾತಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ?

## ಉಡುಪಿ ಜಿಲ್ಲೆಯಲ್ಲಿ ಬಾಕಿಯಿರುವ ಪಟ್ಟಾಭೂಮಿಯ ಪ್ಲಾಟಿಂಗ್‌ಗೆ ಬಂದ ಅರ್ಜಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೬ (೨೦೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಪಟ್ಟಾಭೂಮಿಯ ಪ್ಲಾಟಿಂಗ್‌ಗೆ ಅರ್ಜಿ ಸಲ್ಲಿಸಿ ಪ್ಲಾಟಿಂಗ್‌ಗೆ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಉಡುಪಿ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಪಟ್ಟಾಭೂಮಿಯ ಪ್ಲಾಟಿಂಗ್ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು ; ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು )

(ಇ) ಉಡುಪಿ ಜಿಲ್ಲೆಯಲ್ಲಿ ಅಕ್ರಮ ಸಕ್ರಮ ಯೋಜನೆಯಲ್ಲಿ ಮಂಜೂರಾತಿಯಾದ ಭೂಮಿಯ ಪ್ಲಾಟಿಂಗ್ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು ; ಮಾಡದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ಅವು ಯಾವುವು ; ಮಾಡದೇ ಇರಲು ಕಾರಣವೇನು ? (ತಾಲ್ಲೂಕುವಾರು / ಗ್ರಾಮವಾರು ಮಾಹಿತಿ ನೀಡುವುದು )

## ೧೧–ಇ ನಕ್ಷೆಯ ಗೊಂದಲದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೭ (೨೦೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೧–ಇ ನಕ್ಷೆಯನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗುತ್ತಿದೆ ; ೧೧–ಇ ನಕ್ಷೆಯನ್ನು ಪಡೆಯಲು ಅಗತ್ಯವಾದ ದಾಖಲೆಗಳು ಯಾವುವು ; ಅನುಸರಿಸಬೇಕಾದ ಕ್ರಮಗಳು ಯಾವುವು ; (ಆದೇಶದ ಪ್ರತಿ ಒದಗಿಸುವುದು )

(ಆ) ಯಾವ ಯಾವ ಸಂದರ್ಭದಲ್ಲಿ ಭೂಸ್ವಾಧೀನತೆಯ ಮ್ಯೂಟೇಶನ್ ಮಾಡಲು ೧೧–ಇ ನಕ್ಷೆಯಿಂದ ವಿನಾಯಿತಿಯನ್ನು ನೀಡಲಾಗಿದೆ ; (ಆದೇಶದ ಪ್ರತಿಯನ್ನು ನೀಡುವುದು) ಈ ಕುರಿತು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆಯೇ ;

(ಇ) ರಾಜ್ಯದ ಸಿವಿಲ್ ನ್ಯಾಯಾಲಯದ ಡಿಕ್ರಿ ಆದೇಶದ ಮೂಲಕ ಪಹಣಿ ಮತ್ತು ಖಾತಾ ಮ್ಯೂಟೇಶನ್ ಸಂದರ್ಭದಲ್ಲಿ ನ್ಯಾಯಾಲಯವು ಅನುಮೋದಿಸಿದ ಜಾಗದ ನಕ್ಷೆಯ ಬದಲು ಹೊಸದಾಗಿ ೧೧–ಇ ನಕ್ಷೆಯನ್ನು ಕೋರುತ್ತಿರುವುದರಿಂದ ಅರ್ಜಿದಾರರು ತೊಂದರೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಅರ್ಜಿದಾರರು ನ್ಯಾಯಾಂಗ ನಿಂದನೆ ಅರ್ಜಿ ದಾಖಲಿಸಿರುವುದಕ್ಕೆ ಸರ್ಕಾರದ ಕ್ರಮವೇನು ?

## ಸ್ಮಶಾನಕ್ಕಾಗಿ ಮಂಜೂರಾದ ಭೂಮಿಯನ್ನು ಅಕ್ರಮ ಸಕ್ರಮ ಯೋಜನೆಯಲ್ಲಿ ಭೂಮಿ ಮಂಜೂರಾತಿ ಮಾಡಿರುವ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೮ (೨೦೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ವಿವಿಧ ಸಮುದಾಯದ ಸ್ಮಶಾನಕ್ಕಾಗಿ ಕಾಯ್ದಿರಿಸಿದ ಕಂದಾಯ ಭೂಮಿಯ ಸಂಖ್ಯೆ ಎಷ್ಟು ; ಹಾಗೂ ಅವುಗಳ ವಿಸ್ತೀರ್ಣವೆಷ್ಟು ; ಪಹಣಿಯಲ್ಲಿ ದಾಖಲಾದ ಸ್ಮಶಾನ ಭೂಮಿಯ ಸಂಖ್ಯೆ ಎಷ್ಟು ; ಅವುಗಳಲ್ಲಿ ಗಡಿ ಗುರುತಿಸಿದ

ಹಾಗೂ ಗಡಿ ಗುರುತಿಸದ ಪ್ರಕರಣಗಳ ಸಂಖ್ಯೆ ಎಷ್ಟು ; ಕಾಯ್ದಿರಿಸಿದ ಭೂಮಿಯನ್ನು ಗ್ರಾಮಪಂಚಾಯತಿಗೆ ಹಸ್ತಾಂತರಿಸಿದ ಪ್ರಕರಣಗಳೆಷ್ಟು; ಹಸ್ತಾಂತರಿಸದೇ ಇರುವ ಪ್ರಕರಣಗಳೆಷ್ಟು ; (ತಾಲ್ಲೂಕುವಾರು, ಗ್ರಾಮವಾರು, ಸಮುದಾಯವಾರು ಮಾಹಿತಿ ನೀಡುವುದು )

(ಆ) ಉಡುಪಿ ಜಿಲ್ಲೆಯಲ್ಲಿ ವಿವಿಧ ಸಮುದಾಯದ ಸ್ಮಶಾನಕ್ಕಾಗಿ ಭೂಮಿಯನ್ನು ಕಾಯ್ದಿರಿಸದೇ ಇರುವ ಗ್ರಾಮಗಳು ಯಾವುವು ; ಮತ್ತು ಅವುಗಳಿಗೆ ಸ್ಮಶಾನಕ್ಕಾಗಿ ಜಾಗವನ್ನು ಕಾಯ್ದಿರಿಸಲು ಕ್ರಮ ಕೈಗೊಳ್ಳಲಾಗುವುದು ಯಾವಾಗ ;

(ಇ) ಸ್ಮಶಾನಕ್ಕಾಗಿ ಮಂಜೂರಾದ ಭೂಮಿಯನ್ನು ಅಕ್ರಮ ಸಕ್ರಮ ಯೋಜನೆಯಲ್ಲಿ ಭೂಮಿ ಮಂಜೂರಾತಿ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು ; ಅವು ಯಾವುವು ; ಅಕ್ರಮವಾಗಿ ಮಂಜೂರಾತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರಿಪಡಿಸಲು ಸರ್ಕಾರದ ಕ್ರಮವೇನು ?

## ಪೋಡಿ ಮುಕ್ತ ಗ್ರಾಮ ಯೋಜನೆಯ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೯ (೨೦೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ಪೋಡಿ ಮುಕ್ತ ಗ್ರಾಮ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು; ಈ ಕಾರ್ಯಕ್ರಮದ ಮಾರ್ಗಸೂಚಿ ಯಾವುದು ; (ಸರ್ಕಾರದ ಆದೇಶ ಮಾರ್ಗಸೂಚಿಯ ಪ್ರತಿಯನ್ನು ಒದಗಿಸುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಪೋಡಿ ಮುಕ್ತ ಗ್ರಾಮ ಯೋಜನೆಯನ್ನು ಯಾವ ಯಾವ ಗ್ರಾಮಗಳಲ್ಲಿ ನಡೆಸಲಾಗಿದೆ; ಅಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಪೋಡಿಯಾದ ಪ್ರಕರಣಗಳ ಸಂಖ್ಯೆ ಎಷ್ಟು ; ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಬಾಕಿಯಿರಲು ಕಾರಣಗಳೇನು ;

(ಇ) ಉಡುಪಿ ಜಿಲ್ಲೆಯಲ್ಲಿ ಪೋಡಿ ಮುಕ್ತ ಗ್ರಾಮ ಕಾರ್ಯಕ್ರಮವನ್ನು ಆಯೋಜಿಸಲು ಬಾಕಿಯಿರುವ ಗ್ರಾಮಗಳು ಯಾವುವು; ಬಾಕಿಯಿರಲು ಕಾರಣವೇನು ; ಈ ಕಾರ್ಯಕ್ರಮವನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ಹುಬ್ಬಳ್ಳಿ–ಧಾರವಾಡ ಬೈಪಾಸ್ ರಸ್ತೆಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)** :–

೧೭೪೦ (೨೦೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಹುಬ್ಬಳ್ಳಿ–ಧಾರವಾಡ ಬೈಪಾಸ್ ರಸ್ತೆಯು ಎಷ್ಟು ಕಿಲೋ.ಮೀಟರ್ ವಿಸ್ತೀರ್ಣ ಇದೆ ;

(ಆ) ಈ ರಸ್ತೆಯಲ್ಲಿ ಪದೇ ಪದೇ ಅಪಘಾತ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ರಸ್ತೆಯನ್ನು ನಾಲ್ಕು ಪಥ ಅಥವಾ ಆರು ಪಥ ರಸ್ತೆಯನ್ನಾಗಿ ಪರಿವರ್ತನೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ?

## ವಿಜಯಪುರ ಜಿಲ್ಲೆಯಲ್ಲಿ ೨೦೧೯ ರಿಂದ ೨೦೨೧ ರವರೆಗೆ ಬಿಡುಗಡೆ ಮಾಡಿದ ಅನುದಾನ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)** :–

೧೭೪೧ (೨೦೨೬) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯–೨೦, ೨೦೨೦–೨೧ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಜಾರಿಗೊಳಿಸಿರುವ ಯೋಜನೆಗಳಾವುವು ; ನೀಡಿರುವ ಅನುದಾನ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಯೋಜನೆಗಳಿಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ? (ಫಲಾನುಭವಿಗಳ ವಿವರ ನೀಡುವುದು)

## ಹಿಂದುಳಿದ ವರ್ಗಗಳ ಇಲಾಖೆಯಿಂದ ನಡೆಸುತ್ತಿರುವ ವಸತಿ ಶಾಲೆಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)**

೧೭೪೨ (೨೦೨೫) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಇಲಾಖೆಯಡಿಯಲ್ಲಿ ನಡೆಸುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಸತಿ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ಹಾಗೂ ಬಾಡಿಗೆ ಕಟ್ಟಡಗಳಡಿಯಲ್ಲಿ ನಡೆಯುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು ;

(ಇ) ಪ್ರತಿ ಶಾಲೆಗಳಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? (ವಿವರಿಸುವುದು)

## SEP & TSP ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)**

೧೭೪೩ (೨೦೨೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಲ್ಲಿ ಇಲಾಖೆವತಿಯಿಂದ ಎಸ್‌ಇಪಿ, ಟಿಎಸ್‌ಪಿ ಯೋಜನೆಯಲ್ಲಿ ಬಿಡುಗಡೆಯಾಗಿರುವ ಹಣವೆಷ್ಟು ;

(ಆ) ಕಳೆದ ಎರಡು ವರ್ಷಗಳಿಂದ ಕೈಗೊಂಡಿರುವ ಕಾರ್ಯಕ್ರಮಗಳೇನು? (ತಾಲ್ಲೂಕುವಾರು ವಿವರ ಒದಗಿಸುವುದು)

## ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಿಗೆ ಅನುದಾನ ಬಿಡುಗಡೆ ಬಗ್ಗೆ.

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೪೪ (೧೯೮೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯–೨೦ ಮತ್ತು ೨೦೨೧–೨೨ ರ ಸಾಲಿನಲ್ಲಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ;

(ಆ) ಬಿಡುಗಡೆಯಾಗಿರುವಂತಹ ಅನುದಾನದಲ್ಲಿ ಕೈಗೊಂಡಿರುವಂತಹ ಕಾಮಗಾರಿಗಳ ಸಂಖ್ಯೆ ಎಷ್ಟು;

(ಇ) ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಇಲಾಖೆಯಿಂದ ಕಾಮಗಾರಿಗಳು ಪೂರ್ಣಗೊಂಡ ನಂತರದಲ್ಲಿ ಬಿಡುಗಡೆಯಾಗುವ ಹಣ ಭರವಸೆ ಪತ್ರವನ್ನು (LOC) ಯಾವ ಮಾನದಂಡದಲ್ಲಿ ಬಿಡುಗಡೆ ಮಾಡಲಾಗುತ್ತಿದೆ ; ೨೦೨೦ನೇ

ಸಾಲಿನಲ್ಲಿ ಸದರಿ ಜಿಲ್ಲೆಗಳಿಗೆ ಬಿಡುಗಡೆಯಾದ ಹಣ ಭರವಸೇ ಪತ್ರದ (LOC) ಮಾಹಿತಿಯನ್ನು ನೀಡುವುದು ?

## ಕಂದಾಯ ನಿವೇಶನಗಳಿಗೆ ಇರುವ ವ್ಯವಸ್ಥೆ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೪೫ (೨೦೦೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ನಿವೇಶನ ಎಂದರೇನು; ಕಾನೂನಿನಲ್ಲಿ ಇವುಗಳಿಗಿರುವ ಮಾನ್ಯತೆ ಏನು ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಂದಾಯ ನಿವೇಶನಗಳ ನೋಂದಣಿಯನ್ನು ಸ್ಥಗಿತಗೊಳಿಸಿರುವುದು ನಿಜವೇ ; ಹಾಗಿದ್ದಲ್ಲಿ, ಸ್ಥಗಿತಗೊಳಿಸಲು ಕಾರಣಗಳೇನು ;

(ಇ) ಸ್ಥಗಿತಗೊಂಡಿರುವ ಕಂದಾಯ ನಿವೇಶನಗಳ ನೋಂದಣಿಯನ್ನು ಪ್ರಾರಂಭಿಸುವುದು ಯಾವಾಗ ;

(ಈ) ನೋಂದಣಿ ಮಾಡಿಸಲು ಹಾಲಿ ಇರುವ ಮಾರ್ಗಸೂಚಿ ಷರತ್ತುಗಳೇನು ;

(ಉ) ಈ ಹಿಂದೆ ರಾಜ್ಯದಲ್ಲಿ ಕಂದಾಯ ಜಮೀನನ್ನು ಅರಣ್ಯ ಇಲಾಖೆಗೆ ಸಿ ಮತ್ತು ಡಿ ಲ್ಯಾಂಡ್ ಎಂದು ವರ್ಗೀಕರಿಸಿದ್ದು, ಸದರಿ ಜಮೀನನ್ನು ಮತ್ತೆ ಕಂದಾಯ ಇಲಾಖೆಗೆ ವಾಪಸ್ಸು ಪಡೆಯಲು ಸರ್ಕಾರ ತೀರ್ಮಾನಿಸಿದೆಯೇ; ತೀರ್ಮಾನಿಸಿದ್ದಲ್ಲಿ, ಸರ್ಕಾರದ ಅಧಿಕೃತ ಆದೇಶದ ಪ್ರತಿ ನೀಡುವುದು ;

(ಊ) ಕಂದಾಯ ಇಲಾಖೆಯ ಜಮೀನಿನಲ್ಲಿ ಹೊಸದಾಗಿ ರಾಜ್ಯದಲ್ಲಿ ಎಷ್ಟು ಗ್ರಾಮಗಳಿಗೆ ಸ್ಮಶಾನಕ್ಕಾಗಿ ಜಮೀನು ಮಂಜೂರು ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

## ವಿಜಯಪುರ ಕಲಬುರಗಿ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮಾಡುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೭೪೬ (೨೦೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ವಿಜಯಪುರ ಕಲುಬುರಗಿ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರಿವರ್ತಿಸಲಾಗುವುದೇ ;

(ಆ) ಪ್ರಸ್ತುತ ಜಿಲ್ಲೆಯ ಯಾವ ಯಾವ ಸ್ಥಳಗಳಲ್ಲಿ ಕಾಮಗಾರಿ ಪೂರ್ತಿಗೊಂಡಿದೆ ; ಉಳಿದಿರುವ ಕಾಮಗಾರಿ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಿಂದ ನೆರೆ ಹಾವಳಿಯಿಂದ ಉಂಟಾದ ನಷ್ಟದ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೧೭೪೭ (೨೦೦೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಿಂದ ನೆರೆ ಹಾವಳಿಯಿಂದ ಉಂಟಾದ ನಷ್ಟವೆಷ್ಟು ;

(ಆ) ನೆರೆಹಾವಳಿಯಿಂದ ಮಾನವ ಹಾನಿ, ಜಾನುವಾರು ಹಾನಿ, ಮನೆ ಹಾನಿ ಕೃಷಿ ಫಸಲು ಹಾಗೂ ತೋಟಗಳ ಹಾನಿಯಾದ ವಿವರಗಳನ್ನು ನೀಡುವುದು ಹಾಗೂ ಇದಕ್ಕೆ ನೀಡಿದ ಪರಿಹಾರ ಧನವೆಷ್ಟು ;

(ಇ) ಜಿಲ್ಲೆಯಲ್ಲಿ ಪ್ರತಿ ತಾಲ್ಲೂಕುವಾರು ಸರ್ಕಾರ ನೀಡಿದ ಪರಿಹಾರ ಧನವೆಷ್ಟು ;

(ಈ) ಈ ಪ್ರಕರಣದಡಿ ಬಾಕಿ ಉಳಿದಿರುವ ಅರ್ಜಿಗಳೆಷ್ಟು ಯಾವ ಕಾರಣಕ್ಕಾಗಿ ಬಾಕಿ ಉಳಿದಿವೆ ;

(ಉ) ಶಿವಮೊಗ್ಗ ಜಿಲ್ಲೆಯಲ್ಲಿ ನೆರೆ ಹಾವಳಿಯಿಂದ ಮನೆ ಕಳೆದುಕೊಂಡವರಿಗೆ ೫.೦೦ ಲಕ್ಷ ರೂ.ಗಳನ್ನು ಪರಿಹಾರ ನೀಡಲು ಆದೇಶ ಮಾಡಿದ್ದು, ಇದರಂತೆ ಜಿಲ್ಲೆಯಲ್ಲಿ ಎಷ್ಟು ಮನೆಗಳನ್ನು ಗುರುತಿಸಲಾಗಿದೆ ;

(ಊ) ೫.೦೦ ಲಕ್ಷ ರೂ. ಪರಿಹಾರ ನೀಡಿರುವ ಮನೆಗಳೆಷ್ಟು; ಅದಕ್ಕಿಂತ ಕಡಿಮೆ ಪರಿಹಾರ ನೀಡಿರುವ ಮನೆಗಳೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)** :–

೧೭೪೮ (೨೦೨೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಗೆ ಸಮಾಜ ಕಲ್ಯಾಣ ಇಲಾಖೆಯಿಂದ ವಿವಿದ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಬಿಡುಗಡೆ ಮಾಡಿರುವ ಒಟ್ಟು ಅನುದಾನವೆಷ್ಟು ; (ವಿಧಾನಸಭಾ ಕ್ಷೇತ್ರವಾರು, ವರ್ಷವಾರು, ಲೆಕ್ಕ ಶೀರ್ಷಿಕೆಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಖರ್ಚು ಮಾಡಿರುವ, ಉಳಿಕೆಯಾಗಿರುವ, ತಡೆಹಿಡಿದಿರುವ ಅನುದಾನವೆಷ್ಟು ; (ಮಾಹಿತಿ ಒದಗಿಸುವುದು)

(ಇ) ಹಾಗಾದರೆ, ತಡೆಹಿಡಿದಿರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ದೇವಸ್ಥಾನಗಳ ಅಭಿವೃದ್ಧಿ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೭೪೯ (೨೦೩೨) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಮುಜರಾಯಿ ಇಲಾಖಾ ವ್ಯಾಪ್ತಿಯಲ್ಲಿ ಬರುವ ನೋಂದಾಯಿತ ದೇವಸ್ಥಾನಗಳಿಗೆ ಕಳೆದ ಮೂರು ವರ್ಷಗಳಿಂದ ಬಿಡುಗಡೆ ಮಾಡಿದ ಅನುದಾನವೆಷ್ಟು ; (ವರ್ಷವಾರು, ದೇವಸ್ಥಾನಗಳವಾರು ಸ್ಪಷ್ಟ ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯ ಮುಜರಾಯಿ ದೇವಸ್ಥಾನಗಳಿಗೆ ಅನುದಾನ ಬಿಡುಗಡೆ ಮಾಡದೇ ಇದ್ದಲ್ಲಿ, ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈ ದೇವಸ್ಥಾನಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ಇರುವುದರಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಕಲ್ಯಾಣ ಕರ್ನಾಟಕದಲ್ಲಿನ ಬರಪೀಡಿತ ತಾಲ್ಲೂಕು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೭೫೦ (೨೦೩೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕದ ಎಷ್ಟು ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಗುರುತಿಸಲಾಗಿದೆ; ಬರಪೀಡಿತ ತಾಲ್ಲೂಕುಗಳಾಗಿ ಘೋಷಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ;

(ಆ) ಬರ ಪರಿಸ್ಥಿತಿ ನಿಭಾಯಿಸಲು ಸರ್ಕಾರವು ಜಿಲ್ಲಾಧಿಕಾರಿಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯ ತಾಲ್ಲೂಕಿನಲ್ಲಿ ಅನಾವೃಷ್ಟಿಯಿಂದ ಎಷ್ಟು ರೈತರ ಬೆಳೆಗಳು ಹಾನಿಗೊಳಗಾಗಿವೆ ; (ಬೆಳೆವಾರು ಕ್ಷೇತ್ರ ಮತ್ತು ಹಾನಿ ಮೊತ್ತದ ಮಾಹಿತಿ ನೀಡುವುದು)

(ಈ) ಹಾನಿಗೊಳಗಾದ ರೈತರಿಗೆ ಪರಿಹಾರ ನೀಡಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ರೈತರಿಗೆ ಎಷ್ಟು ಪರಿಹಾರ ನೀಡಲಾಗಿದೆ; ಇಲ್ಲವಾದಲ್ಲಿ, ಇನ್ನೂ ಪರಿಹಾರ ನೀಡದೇ ಇರಲು ಕಾರಣಗಳೇನು ; ಬರ ಪರಿಹಾರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಸತಿ ಇಲಾಖೆಯ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೭೫೧ (೨೦೩೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಗೆ ವಸತಿ ಇಲಾಖೆಯಿಂದ ವಿವಿದ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಬಿಡುಗಡೆ ಮಾಡಿರುವ ಒಟ್ಟು ಅನುದಾನವೆಷ್ಟು; (ವಿಧಾನ ಸಭಾ ಕ್ಷೇತ್ರವಾರು, ವರ್ಷವಾರು, ಲೆಕ್ಕ ಶೀರ್ಷಿಕೆಗಳವಾರು ಸ್ಪಷ್ಟ ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಖರ್ಚು ಮಾಡಿರುವ, ಉಳಿಕೆಯಾಗಿರುವ, ತಡೆಹಿಡಿದಿರುವ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಇ) ತಡೆಹಿಡಿದಿರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ತಡೆಹಿಡಿಯಲಾದ ಅನುದಾನವನ್ನು ಬಿಡುಗಡೆ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಜಾರಿಗೊಳಿಸಿರುವ ಫಲಾನುಭವಿ ಯೋಜನೆ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೭೫೨ (೨೦೩೭) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ಫಲಾನುಭವಿ ಯೋಜನೆಗಳು ಯಾವುವು ; ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳು ಯಾವುವು ; (ಯೋಜನೆವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಈ ಯೋಜನೆಗಳಡಿ ಬಿಡುಗಡೆ ಮಾಡಿದ ಅನುದಾನವೆಷ್ಟು ; ಖರ್ಚಾಗಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳು ಯಾರ್‍ಯಾರು ? (ತಾಲ್ಲೂಕುವಾರು ಹೆಸರು ಮತ್ತು ವಿಳಾಸದೊಂದಿಗೆ ವಿವರ ನೀಡುವುದು)

## ರಾಜ್ಯದಲ್ಲಿ ಇರುವ ಗೋಮಾಳಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) :–**

೧೭೫೩ (೨೦೩೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಗೋಮಾಳಗಳ ಸಂಪೂರ್ಣ ಮಾಹಿತಿ ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ ಗೋಮಾಳಗಳ ವಿವರ, ಅವುಗಳ ವಿಸ್ತೀರ್ಣದ ಮಾಹಿತಿಯನ್ನು ತಾಲ್ಲೂಕುವಾರು ಮತ್ತು ಗ್ರಾಮವಾರು ನೀಡುವುದು ;

(ಆ) ರಾಜ್ಯದಲ್ಲಿನ ಕಳೆದ ೫ ವರ್ಷಗಳಲ್ಲಿ ಗೋಮಾಳಗಳ ಅತಿಕ್ರಮಣ ಮತ್ತು ಗೋಮಾಳ ರದ್ಧತಿಯ ಎಷ್ಟು ಪ್ರಕರಣಗಳು ದಾಖಲಾಗಿವೆ ; ಇಂತಹ ಪ್ರಕರಣಗಳಿದ್ದಲ್ಲಿ ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಸರ್ಕಾರವು ಗೋಮಾಳಗಳನ್ನು ನಿರ್ಮಾಣ ಮಾಡಿರುವ ಉದ್ದೇಶಗಳೇನು ; ಈ ಉದ್ದೇಶಗಳನ್ನು ಕಾರ್ಯರೂಪದಲ್ಲಿ ಅನುಷ್ಠಾನಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

**ಮೀನುಗಾರಿಕೆ ಇಲಾಖೆಯ ವಿಸ್ತರಣೆ ಕಾರ್ಯಕ್ರಮಗಳ ಅನುಷ್ಠಾನ**

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೭೫೪ (೨೦೩೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಇಲಾಖಾವತಿಯಿಂದ ವಿವಿಧ ಯೋಜನೆಯಡಿ ಕೈಗೊಂಡ ವಿಸ್ತರಣಾ ಚಟುವಟಿಕೆಗಳು, ಬಿಡುಗಡೆಯಾದ ಅನುದಾನ, ವೆಚ್ಚವಾದ ಅನುದಾನವೆಷ್ಟು; (ತಾಲ್ಲೂಕುವಾರು, ಕಾರ್ಯಕ್ರಮವಾರು ವಿವರ ನೀಡುವುದು)

(ಆ) ತರಬೇತಿ ಕಾರ್ಯಕ್ರಮ ನೀಡಲಾದ ರೈತರು/ಮೀನುಗಾರರುಗಳೆಷ್ಟು; (ರೈತರ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಇಲಾಖೆಯಿಂದ ಪ್ರವಾಸ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆಯೇ; (ವಿವರವಾದ ಮಾಹಿತಿ ನೀಡುವುದು)

(ಈ) ತರಬೇತಿ/ಪ್ರವಾಸ ಕಾರ್ಯಕ್ರಮದ ನಂತರ ಆದ ಅಭಿವೃದ್ಧಿಗಳೇನು? (ತಾಲ್ಲೂಕುವಾರು ವಿವರ ನೀಡುವುದು)

## ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೭೫೫ (೨೦೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ನೀಡಲು ಯಾವ ಕಾಯ್ದೆಯಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ; (ಕಾಯ್ದೆಯ ಸಂಪೂರ್ಣ ವಿವರ ನೀಡುವುದು)

(ಆ) ಕರ್ನಾಟಕ ಭೂ ಕಂದಾಯ ಅಧಿನಿಯಮದಡಿ ಕೆಲವು ತುರ್ತು ಸಂದರ್ಭಗಳಲ್ಲಿ ಸರ್ಕಾರಿ ಭೂಮಿಯನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಯವರಿಗೆ ಅವಕಾಶ ಕಲ್ಪಿಸಲಾಗಿದೆಯೇ ; (ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು)

(ಇ) ಸರ್ಕಾರಿ ಶಾಲೆಗಳು, ಸರ್ಕಾರಿ ವಸತಿ ಶಾಲೆಗಳು ಹಾಗೂ ಇತರೆ ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ಮಾಡಲು ಇರುವಂತಹ ಮಾನದಂಡಗಳೇನು ? (ವಿವರ ನೀಡುವುದು)

## ಸರ್ಕಾರಿ ಜಾಗದ ಅಕ್ರಮ ಒತ್ತುವರಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೬ (೧೯೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೆ ನಂ. ೬೩ ರಲ್ಲಿ ೫ ಎಕರೆ ಸ್ಥಳವನ್ನು ಇಸ್ಲಾಮಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಶಿಕ್ಷಣ ಸಂಸ್ಥೆಯವರು

ಎಂದಿನಿಂದ ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುತ್ತಾರೆ; ಅಕ್ರಮ ಒತ್ತುವರಿ ಕುರಿತು ಸರ್ಕಾರಕ್ಕೆ ಯಾವ ದಿನಾಂಕದಂದು ಮಾಹಿತಿ ಬಂದಿದೆ; (ವಿವರ ನೀಡುವುದು )

(ಆ) ಸದರಿ ಸ್ಥಳವನ್ನು ಅಕ್ರಮವಾಗಿ ಇಸ್ಲಾಮಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಶಿಕ್ಷಣ ಸಂಸ್ಥೆಯವರು ಒತ್ತುವರಿ ಮಾಡಿದ ದಿನಾಂಕದಿಂದ ಇಂದಿನವರೆಗೆ ಆ ಸ್ಥಳದ ಅಧಿಕಾರ ವ್ಯಾಪ್ತಿಯನ್ನು ಹೊಂದಿದ್ದ ತಹಶೀಲ್ದಾರ್, ಎ.ಸಿ., ಮತ್ತು ಜಿಲ್ಲಾಧಿಕಾರಿಗಳು ಯಾರು ; (ಹೆಸರು ಮತ್ತು ಸದರಿಯವರು ಕರ್ತವ್ಯ ನಿರ್ವಹಿಸಿದ ಅವಧಿಯೊಂದಿಗೆ ವಿವರ ನೀಡುವುದು)

(ಇ) ಸದರಿ ಸ್ಥಳವನ್ನು ಅಕ್ರಮವಾಗಿ ಇಸ್ಲಾಮಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಶಿಕ್ಷಣ ಸಂಸ್ಥೆಯವರು ಒತ್ತುವರಿ ಮಾಡಿದ ದಿನಾಂಕದಿಂದ ಇಂದಿನವರೆಗೆ ಆ ಸ್ಥಳದ ಅಧಿಕಾರ ವ್ಯಾಪ್ತಿಯನ್ನು ಹೊಂದಿದ್ದ ತಹಶೀಲ್ದಾರ್, ಎ.ಸಿ., ಮತ್ತು ಜಿಲ್ಲಾಧಿಕಾರಿಗಳು ಸದರಿ ಅಕ್ರಮ ಒತ್ತುವರಿಯನ್ನು ತೆರವುಗೊಳಿಸಲು ಕೈಗೊಂಡ ಕ್ರಮಗಳ ಕುರಿತು ಅಗತ್ಯ ಮಾಹಿತಿ ನೀಡುವುದು?

## ಅಕ್ರಮ ಒತ್ತುವರಿ ಸರ್ಕಾರಿ ಜಾಗದಲ್ಲಿ ಕಟ್ಟಡ ನಿರ್ಮಾಣ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೭ (೯೮೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೆ ನಂಬರ್ ೭೩ ರಲ್ಲಿ ೫ ಎಕರೆ ಸ್ಥಳವನ್ನು ಇಸ್ಲಾಮಿ ಇನ್ಸ್‌ಟಿಟ್ಯೂಟ್ ಆಫ್

ಟೆಕ್ನಾಲಜಿ ಕಾಲೇಜು ಶಿಕ್ಷಣ ಸಂಸ್ಥೆಯವರು ಅಕ್ರಮವಾಗಿ ಒತ್ತುವರಿ ಮಾಡಿದ ಜಾಗದಲ್ಲಿ ಯಾವಾಗ ಕಟ್ಟಡ ಕಟ್ಟಲು ಆರಂಭಿಸಿದರು; ಈ ಬಗ್ಗೆ ಸರ್ಕಾರಕ್ಕೆ ಅಕ್ರಮ ಕಟ್ಟಡ ನಿರ್ಮಾಣದ ಕುರಿತು ಮಾಹಿತಿ ಬಂದ ದಿನಾಂಕ ಯಾವುದು;

(ಆ) ಆಕ್ರಮಿತ ಜಾಗದಲ್ಲಿರುವ ಅಕ್ರಮ ಕಟ್ಟಡದ ವಿಸ್ತೀರ್ಣವೆಷ್ಟು; ಅದರಲ್ಲಿ ಎಷ್ಟು ಮಹಡಿಗಳು ಇವೆ; (ಸಂಪೂರ್ಣ ವಿವರ ನೀಡುವುದು)

(ಇ) ಈ ಸರ್ವೇ ನಂಬರ್ ೬೩ ರಲ್ಲಿ ಅಕ್ರಮವಾಗಿ ಕಟ್ಟಡ ನಿರ್ಮಾಣ ಸಮಯದಲ್ಲಿ ಅಕ್ರಮ ನಿರ್ಮಾಣ ಕುರಿತು ಸದರಿ ಸಂಸ್ಥೆಯವರಿಗೆ ಎಷ್ಟು ಬಾರಿ ನೋಟಿಸ್ ನೀಡಲಾಗಿದೆ; ಯಾವ ಯಾವ ದಿನಾಂಕಗಳಂದು ನೊಟೀಸ್ ನೀಡಲಾಗಿದೆ; ನೋಟೀಸ್‌ಗೆ ಉತ್ತರ ಬರದಿದ್ದಲ್ಲಿ ಈ ಕುರಿತು ಕೈಗೊಂಡ ಕ್ರಮಗಳೇನು?

## ಶಿಕ್ಷಣ ಸಂಸ್ಥೆಗಳು ಸರ್ಕಾರಿ ಜಾಗ ಒತ್ತುವರಿ ಮಾಡಿದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೮ (೧೯೯೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಇರುವ ಶಿಕ್ಷಣ ಸಂಸ್ಥೆಗಳು ಎಷ್ಟು ಸರ್ಕಾರಿ ಜಾಗವನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಕ್ರಮವಾಗಿ ಒತ್ತುವರಿ ಮಾಡಿದ ಸರ್ಕಾರಿ ಜಾಗವನ್ನು ಅದೇ ಸಂಸ್ಥೆಗೆ ಮಂಜೂರುಮಾಡುವಂತೆ ಕೋರಿ ಎಷ್ಟು ಮನವಿಗಳು ಸರ್ಕಾರಕ್ಕೆ ಸಲ್ಲಿಕೆಯಾಗಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅಕ್ರಮವಾಗಿ ಒತ್ತುವರಿ ಮಾಡಿದ ಸರ್ಕಾರಿ ಜಾಗವನ್ನು ಮಂಜೂರು ಮಾಡುವ ಸಮಯದಲ್ಲಿ ಆ ಜಾಗವನ್ನು ಮಂಜೂರು ಮಾಡಲು ನಿಗದಿಪಡಿಸುವ ಮೊತ್ತ ಎಷ್ಟು;

(ಈ) ಸದರಿ ಜಾಗವನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡು ಅನೇಕ ವರ್ಷಗಳಿಂದ ಅನುಭವಿಸಿಕೊಂಡು ಬರಲಾಗಿದೆ ಎಂಬುದಾಗಿ ಲಿಖಿತ ಹೇಳಿಕೆ ನೀಡುವ ಸಂಸ್ಥೆಗಳಿಗೆ ಅದೇ ಜಾಗವನ್ನು ಮಂಜೂರು ಮಾಡುವ ಸಮಯದಲ್ಲಿ ಮಾರುಕಟ್ಟೆ ದರಕ್ಕಿಂತ ೧೦ ಪಟ್ಟುದರ ನಿಗದಿ ಮಾಡುವ ಕುರಿತು ಸರ್ಕಾರದ ನಿಲುವೇನು?

## ಸರ್ಕಾರಿ ಜಾಗ ಮಂಜೂರಾತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೫ (೧೯೯೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಜಾಗವನ್ನು ಯಾವ ಯಾವ ಸಂದರ್ಭಗಳಲ್ಲಿ ಮಂಜೂರು ಮಾಡಬಹುದು; ಜಾಗ ಮಂಜೂರಾತಿಗೆ ಇರುವ ನಿಯಮಗಳೇನು;

(ಆ) ಕಳೆದ ೫ ವರ್ಷಗಳಲ್ಲಿ ಎಷ್ಟು ಎಕರೆ ಸರ್ಕಾರಿ ಜಾಗವನ್ನು ಕೋರಿಕೆಯ ಮನವಿ ಮೇರೆಗೆ ಮಂಜೂರು ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಸರ್ಕಾರಿ ಜಾಗವನ್ನು ಮಂಜೂರು ಮಾಡುವುದರಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಪ್ರಸ್ತುತ ಇರುವ ಗೋಶಾಲೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೬೦ (೨೧೬೯) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ರಾಜ್ಯದಲ್ಲಿರುವ ಸರ್ಕಾರಿ ಗೋಶಾಲೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು )

(ಆ) ಪ್ರಸ್ತುತ ರಾಜ್ಯದಲ್ಲಿರುವ ಖಾಸಗಿ/ ಸೇವಾ ಟ್ರಸ್ಟ್‌ಗಳು/ಮಠಗಳು ನಡೆಸುತ್ತಿರುವ ಗೋಶಾಲೆಗಳು ಎಷ್ಟು ; ಅವುಗಳು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು )

(ಇ) ಈ ಗೋಶಾಲೆಗಳಿಗೆ ದಿನ ಒಂದಕ್ಕೆ ಒಂದು ಜಾನುವಾರಿಗೆ ಸರ್ಕಾರ ಎಷ್ಟು ಅನುದಾನ ನೀಡುತ್ತಿದೆ; (ವಿವರ ನೀಡುವುದು)

(ಈ) ಪ್ರಸ್ತುತ ವಾರ್ಷಿಕವಾಗಿ ರಾಜ್ಯದಲ್ಲಿರುವ ಗೋಶಾಲೆಗಳಿಗೆ ಸರ್ಕಾರ ಬಿಡುಗಡೆ ಮಾಡಿದ , ಖರ್ಚಾದ ಹಾಗೂ ಬಾಕಿ ನೀಡಬೇಕಾಗಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು )

(ಉ) ತಾಲ್ಲೂಕುವಾರು ಗೋಶಾಲೆಗಳನ್ನು ತೆರೆಯಲಾಗಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು; ಇಲ್ಲವಾದಲ್ಲಿ ಯಾವ ಯಾವ ತಾಲ್ಲೂಕಿನಲ್ಲಿ ತೆರೆಯಲಾಗಿದೆ ; ಇನ್ನೂ ಯಾವ ತಾಲ್ಲೂಕುಗಳು ಗೋಶಾಲೆ ತೆರೆಯಲು ಬಾಕಿ ಇದೆ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು;

(ಊ) ಪ್ರಸ್ತುತ ರಾಜ್ಯದಲ್ಲಿರುವ ಜಾನುವಾರುಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿನ ಯೋಜನೆಯ ಕುರಿತು

**ಶ್ರೀ ಪಿ.ಆರ್ ರಮೇಶ್ (ನಾಮ ನಿರ್ದೇಶನ ಹೊಂದಿದವರು) :–**

೧೭೬೧ (೨೦೪೪) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿರುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಇಲಾಖೆಯಡಿಯಲ್ಲಿ ಮೀಸಲಿಟ್ಟ ಅನುದಾನ ಖರ್ಚಾದ ಅನುದಾನ ಮತ್ತು ತೆಗೆದುಕೊಂಡ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಇ) ಪ್ರಸಕ್ತ ವರ್ಷದಲ್ಲಿ ಇಲಾಖೆಯಲ್ಲಿ ಯಾವುದಾದರೂ ಹೊಸ ಯೋಜನೆ ಪ್ರಾರಂಭ ಮಾಡಲು ಸರ್ಕಾರ ಚಿಂತಿಸಿದೆಯೇ ? (ವಿವರ ನೀಡುವುದು)

## ಸಂವಿಧಾನ ೩೭೧ಜೆ ಅಡಿಯಲ್ಲಿ ಸುಳ್ಳು ದಾಖಲೆ ನೀಡಿ ಅರ್ಹತಾ ಪ್ರಮಾಣ ಪತ್ರ ಪಡೆಯುತ್ತಿರುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೭೬೨ (೧೯೮೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಆ) ಸಂವಿಧಾನದ ೩೭೧ಜೆ ಅಡಿಯಲ್ಲಿ ಸುಳ್ಳು ದಾಖಲೆ ನೀಡಿ ಪಡೆದಂತಹ ಅರ್ಹತಾ ಪ್ರಮಾಣ ಪತ್ರಗಳನ್ನು ರದ್ದು ಪಡಿಸಲು ಇರುವ ಸಕ್ಷಮ ಪ್ರಾಧಿಕಾರ ಯಾರು;

(ಆ) ಸುಳ್ಳು ಅರ್ಹತಾ ಪ್ರಮಾಣ ಪತ್ರಗಳನ್ನು ರದ್ದುಪಡಿಸಲು ಸರಕಾರ ಕೈಗೊಂಡ ಕ್ರಮಗಳೇನು; ಸುಳ್ಳು ಅರ್ಹತಾ ಪ್ರಮಾಣ ಪತ್ರಗಳನ್ನು ರದ್ದುಪಡಿಸಲು ಸಹಾಯಕ ಆಯುಕ್ತರು ಮತ್ತು ಜಿಲ್ಲಾಧಿಕಾರಿಗಳು ವಿಳಂಬ ಮಾಡುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

(ಇ) ಸಂವಿಧಾನದ ೩೭೧ಜೆ ಕಾನೂನು ಅಡಿಯಲ್ಲಿ ಅರ್ಹತಾ ಪ್ರಮಾಣ ಪತ್ರ ಅನುಬಂಧ–೧ ಮತ್ತು ಅನುಬಂಧ–ಬಿ ಯಲ್ಲಿ ಎಷ್ಟು ಸುಳ್ಳು ಪ್ರಮಾಣ ಪತ್ರಗಳನ್ನು ವಿತರಿಸಲಾಗಿದೆ; ಅಂತಹ ಎಷ್ಟು ಸುಳ್ಳು ಪ್ರಮಾಣ ಪತ್ರಗಳನ್ನು ಇಲ್ಲಿಯವರೆಗೆ ರದ್ದುಪಡಿಸಲಾಗಿದೆ;

(ಈ) ಸುಳ್ಳು ಅರ್ಹತಾ ಪ್ರಮಾಣ ಪತ್ರಗಳನ್ನು ರದ್ದುಪಡಿಸಲು ಇಲ್ಲಿಯವರೆಗೆ ಸಲ್ಲಿಸಲಾದ ಅರ್ಜಿಗಳು ಎಷ್ಟು; ಅವುಗಳಲ್ಲಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ಬಾಕಿ ಇರುವ ಅರ್ಜಿಗಳು ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಸುಳ್ಳು ಪ್ರಮಾಣ ಪತ್ರಗಳನ್ನು ವಿತರಿಸಿದ ಅಧಿಕಾರಿಗಳ ಮೇಲೆ ಯಾವ ಕ್ರಮ ಜರುಗಿಸಲಾಗಿದೆ;

(ಊ) ಸುಳ್ಳು ದಾಖಲೆ ನೀಡಿ ೩೭೧ಜೆ ಅರ್ಹತಾ ಪ್ರಮಾಣ ಪತ್ರಗಳನ್ನು ಪಡೆದಂತಹ ಅಭ್ಯರ್ಥಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಮೀನುಗಾರಿಕೆ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಹಾಗೂ ಕೆರೆ/ಕಟ್ಟೆಗಳಲ್ಲಿ ಉತ್ಪಾದನೆಯಾಗುವ ಮೀನುಗಳ ಉತ್ಪಾದನೆ ಕುರಿತು

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ):–**

೧೭೬೩ (೨೦೮೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:_

(ಅ) ಮೀನುಗಾರಿಕೆ ಇಲಾಖೆಯಲ್ಲಿ ತಾಲ್ಲೂಕು/ಜಿಲ್ಲೆ/ವಿಭಾಗ ಮಟ್ಟದ ಮಂಜೂರಾದ ವಿವಿಧ ಹುದ್ದೆಗಳು ಎಷ್ಟು;

(ಆ) ಈ ರೀತಿ ಮಂಜೂರಾದ ವಿವಿಧ ಹಂತದ ಹುದ್ದೆಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವವರೆಷ್ಟು ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ;

(ಇ) ಗದಗ, ಧಾರವಾಡ, ಹಾವೇರಿ ಮತ್ತು ಕಾರವಾರ ಜಿಲ್ಲೆಗಳಲ್ಲಿ ಮೀನುಗಳನ್ನು ಬೆಳೆಸುವ ಒಟ್ಟು ಕೆರೆ/ಕಟ್ಟೆಗಳ ಸಂಖ್ಯೆ ಎಷ್ಟು;

(ಈ) ಈ ಕೆರೆ/ಕಟ್ಟೆಗಳಿಂದ ಎಷ್ಟು ಮಟ್ಟದ ಮೀನುಗಳ ಉತ್ಪಾದನೆ ಆಗುತ್ತಿದೆ; ಇದರಿಂದ ಸರ್ಕಾರಕ್ಕೆ ಆಗುವ ಆದಾಯವೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ೨೦೧೨–೧೩ ರಲ್ಲಿ ನೀಡಿರುವ ಸಾಗುವಳಿ ಚೀಟಿ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೪ (೨೦೪೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ೨೦೧೨–೧೩ ರಲ್ಲಿ ಅಕ್ರಮ –ಸಕ್ರಮದ ಅಡಿಯಲ್ಲಿ ಎಷ್ಟು ಜನ ರೈತರಿಗೆ ಸಾಗುವಳಿ ಚೀಟಿಯನ್ನು ನೀಡಲಾಗಿದೆ ;

(ಆ) ಈ ರೀತಿ ಸಾಗುವಳಿ ಚೀಟಿಯನ್ನು ಪಡೆದ ಎಷ್ಟು ಜನ ರೈತರ ಹೆಸರಿಗೆ ಆರ್.ಟಿ.ಸಿ. ಬಂದಿದೆ ;

(ಇ) ಸದರಿ ರೈತರು ಪಡೆದಿರುವ ಆರ್.ಟಿ.ಸಿ.ಗಳನ್ನು ರದ್ದುಪಡಿಸಲಾಗಿದೆಯೇ ;

(ಈ) ೨೦೧೫–೧೬ ರಲ್ಲಿ ಸದರಿ ಸಾಗುವಳಿ ಚೀಟಿ ಹಾಗೂ ಆರ್.ಟಿ.ಸಿ. ಗಳನ್ನು ನೀಡಲು ಹೊರಡಿಸಿರುವ ಆದೇಶವನ್ನು ರದ್ದುಪಡಿಸಲಾಗಿದೆಯೇ ?

## ಕೊಡಗು ಜಿಲ್ಲೆಯಲ್ಲಿ ಯರವ ಸಮುದಾಯಕ್ಕೆ ಪ್ರಮಾಣ ಪತ್ರ ನೀಡುವ ಬಗ್ಗೆ

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೬೫ (೨೦೪೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:_

(ಅ) ಕೊಡಗು ಜಿಲ್ಲೆಯಲ್ಲಿ ಯರವ ಸಮುದಾಯಕ್ಕೆ ಈ ಹಿಂದೆ ನೀಡುತ್ತಿದ್ದಂತೆ ಪಂಜರಿ, ಪಣಿಯರವ ಎಂಬ ಮೂಲ ಹೆಸರುಗಳನ್ನು ಪ್ರಮಾಣ ಪತ್ರ ಗುರುತಿನ ಚೀಟಿ ಹಾಗೂ ಇತರೇ ದಾಖಲಾತಿಗಳಲ್ಲಿ ನಮೂದಿಸದೇ ಯರವ ಎಂದು ನಮೂದಿಸಿ ನೀಡುತ್ತಿರುವುದಿಂದ ಸಮುದಾಯದ ಮೂಲಕ್ಕೆ ಕಂಟಕ ಎದುರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಹಿಂದಿನಂತೆ ಪಂಜರಿ ಯರವ, ಪಣಿ ಯರವ ಎಂದು ನಮೂದಿಸಿ ಪ್ರಮಾಣ ಪತ್ರ, ಗುರುತಿನ ಚೀಟಿ ಹಾಗೂ ಇತರೆ ದಾಖಲಾತಿಗಳನ್ನು ನೀಡಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ ?

## ಕೊಡಗು ಜಿಲ್ಲೆಯ ಶನಿವಾರಸಂತೆ ಭಾಗದಲ್ಲಿ ಭಾರಿ ಮಳೆಯಿಂದ ಆಗಿರುವ ಹಾನಿ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೬(೨೦೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:_

(ಅ) ಕೊಡಗು ಜಿಲ್ಲೆಯ ಶನಿವಾರ ಸಂತೆ ಭಾಗದಲ್ಲಿ ಇತ್ತೀಚೆಗೆ ಮಂಜುಗಡೆ ಸಹಿತ ಭಾರಿ ಮಳೆಯಿಂದ ಸಾಕಷ್ಟು ಬೆಲೆ ಹಾನಿಯಾಗಿ, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಮೊತ್ತದ ಮತ್ತು ಎಷ್ಟು ವಿಸ್ತೀರ್ಣದ ಬೆಳೆ ಹಾನಿಯನ್ನು ಅಂದಾಜು ಮಾಡಲಾಗಿದೆ ;

(ಇ) ಸದರಿ ನಷ್ಟಕ್ಕೀಡಾದ ರೈತರಿಗೆ ಸೂಕ್ತ ಪರಿಹಾರ ನೀಡಲಾಗಿದೆಯೇ; ಇದುವರೆಗೂ ಪರಿಹಾರ ನೀಡದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಅವರಿಗೆ ಪರಿಹಾರ ನೀಡಲಾಗುವುದು ?

## ಮುಜರಾಯಿ ದೇವಸ್ಥಾನಗಳಲ್ಲಿ ಎಸ್.ಸಿ/ಎಸ್.ಟಿ. ಅರ್ಚಕರನ್ನು ನೇಮಿಸುವ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೬೭ (೨೦೦೯) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮುಜರಾಯಿ ದೇವಸ್ಥಾನಗಳಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಟ ವರ್ಗದ ಅರ್ಚಕರನ್ನು ನೇಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಕೇರಳ ರಾಜ್ಯದಲ್ಲಿರುವಂತೆ ನಮ್ಮ ರಾಜ್ಯದಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗದ ಅರ್ಚಕರನ್ನು ರಾಜ್ಯದ ಮುಜರಾಯಿ ದೇವಸ್ಥಾನಗಳಲ್ಲಿ ನೇಮಕಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕುಲಕಸುಬುದಾರರಿಗೆ ಆರ್ಥಿಕ ಚೈತನ್ಯ ನೀಡುವ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೬೮ (೨೦೧೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕುಲಕಸುಬನ್ನೇ ಆಧರಿಸಿ ಜೀವನ ಸಾಗಿಸುತ್ತಾ ಬಂದಿದ್ದ ವರ್ಗಗಳಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕುಲಕಸುಬುದಾರರು ಇಂದು ಪರ್ಯಾಯ ಉದ್ಯೋಗದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ತಮ್ಮ ಕುಲಕಸುಬನ್ನು ತೊರೆಯಲು ಕಾರಣವಾದ ಅಂಶಗಳೇನು ಎಂಬುದರ ಬಗ್ಗೆ ಸರ್ಕಾರ ಸಮೀಕ್ಷೆ ನಡೆಸಿದೆಯೇ;

(ಈ) ಮೂಲ ಕುಲಕಸುಬುದಾರರಿಗೆ ಆರ್ಥಿಕ ಯೋಜನೆಗಳನ್ನು ಪ್ರಕಟಿಸಿ ಉತ್ತೇಜಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಗ್ರಾಮೀಣ ಮತ್ತು ಪಟ್ಟಣ ಪ್ರದೇಶಗಳಲ್ಲಿ ವಸತಿ ಸೌಲಭ್ಯದ ಕೊರತೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೭೬೯ (೨೦೪೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಗ್ರಾಮೀಣ ಮತ್ತು ಪಟ್ಟಣ ಪ್ರದೇಶಗಳಲ್ಲಿ ವಸತಿ ಸೌಲಭ್ಯದ ಕೊರತೆ ಕುರಿತು ಕೇಂದ್ರ ಅಥವಾ ರಾಜ್ಯ ಸರ್ಕಾರಗಳು ಯಾವಾಗ ಸಮೀಕ್ಷೆ/ಗಣತಿ ನಡೆಸಿದೆ; ಈ ಸಮೀಕ್ಷೆ/ಗಣತಿ ಅನ್ವಯ ರಾಜ್ಯದಲ್ಲಿ ಗ್ರಾಮಾಂತರ ಮತ್ತು ಪಟ್ಟಣ ಪ್ರದೇಶಗಳಲ್ಲಿ ವಸತಿಹೀನರಾಗಿರುವವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಸಮೀಕ್ಷೆ/ಗಣತಿಯಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಗುರುತಿಸಲಾಗಿರುವ ಕೊಳಚೆ ಪ್ರದೇಶಗಳು ಯಾವುವು; (ಸಂಪೂರ್ಣ ವಿವರ ನೀಡುವುದು)

(ಇ) ಕೇಂದ್ರ ಸರ್ಕಾರದ ವಸತಿ ಮತ್ತು ನಗರ ವ್ಯವಹಾರ ಮಂತ್ರಾಲಯದ ಪ್ರಧಾನ ಮಂತ್ರಿ ಆವಾಸ್ ಯೋಜನೆಯಂತೆ ಗ್ರಾಮಾಂತರ ಮತ್ತು ನಗರ ಪ್ರದೇಶಗಳಲ್ಲಿ ವಸತಿ ಕೊರತೆಯನ್ನು ನೀಗಿಸಲು ರಾಜ್ಯ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮ/ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕೋವಿಡ್–೧೯ ಸೋಂಕು ಹರಡುವಿಕೆ ಸಂದರ್ಭದಲ್ಲಿ ಘೋಷಿತವಾದ, ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿಯಲ್ಲಿನ ಕೈಗೆಟಕುವ ವಸತಿಯೋಜನೆ (Affordable Housing Scheme) ಅನುಷ್ಠಾನ ರಾಜ್ಯದಲ್ಲಿ ಯಾವ ಹಂತದಲ್ಲಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಪ್ರಧಾನ ಮಂತ್ರಿ ಆವಾಸ್ ಯೋಜನೆಯು ೨೦೨೨ ರವರೆಗೆ ಮಾತ್ರ ಅನುಷ್ಠಾನದಲ್ಲಿ ಇರುವುದಾಗಿ ಘೋಷಿತವಾಗಿದ್ದು, ಈ ಅವಧಿಯಲ್ಲಿ ರಾಜ್ಯದಲ್ಲಿನ ಪ್ರತಿಯೊಬ್ಬ ವಸತಿಹೀನರಿಗೆ ವಸತಿ ಒದಗಿಸಲು ಸಾಧ್ಯವೇ; ಇಲ್ಲದಿದ್ದಲ್ಲಿ, ಈ ಯೋಜನೆಯನ್ನು ಮುಂದುವರೆಸುವಂತೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರವನ್ನು ಕೋರುವುದೇ ಮತ್ತು ಮುಂದಿನ ೫ ವರ್ಷಗಳಲ್ಲಿ ರಾಜ್ಯದಲ್ಲಿ ಎಲ್ಲಾ ವಸತಿಹೀನರಿಗೆ ವಸತಿ ಒದಗಿಸಲು ರಾಜ್ಯ ಸರ್ಕಾರ ಆಯವ್ಯಯದಲ್ಲಿ ಅಗತ್ಯ ಅನುದಾನ ಒದಗಿಸುವುದೇ ? (ವಿವರ ಒದಗಿಸುವುದು)

## ಮತ್ಸ್ಯ ಅಭಿವೃದ್ಧಿ ಕಾರ್ಯಕ್ರಮಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೭೭೦ (೨೦೩೯) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಮುದ್ರದಿಂದ ಮತ್ತು ಒಳನಾಡು ನೀರಿನಿಂದ ಉತ್ಪಾದನೆಯಾಗಿರುವ ಮೀನಿನ ಪ್ರಮಾಣವೆಷ್ಟು ;

(ಆ) ರಾಜ್ಯ ಸರ್ಕಾರ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಯಾವ ಯಾವ ಯೋಜನೆಗಳ ಅಡಿಯಲ್ಲಿ ಮತ್ಸ್ಯಅಭಿವೃದ್ಧಿಗೆ ಕಾರ್ಯಕ್ರಮಗಳನ್ನು ರೂಪಿಸಿದೆ; ಈ ಕಾರ್ಯಕ್ರಮಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ತೊಡಗಿಸಿರುವ ಅನುದಾನವೆಷ್ಟು; ಭೌತಿಕ–ಆರ್ಥಿಕ ಗುರಿಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಯೋಜನೆ ಅಡಿ ಇದುವರೆಗೂ ಸ್ಥಾಪಿಸಲಾಗಿರುವ ಮೀನು ಕೃಷಿಕರ ಅಭಿವೃದ್ದಿ ಸಂಸ್ಥೆಗಳು ಮತ್ತು ಉಪ್ಪು ನೀರು ಮೀನು–ಕೃಷಿಕರ ಅಭಿವೃದ್ಧಿ ಸಂಸ್ಥೆಗಳು ಎಷ್ಟು; ಮತ್ತು ಈ ಸಂಸ್ಥೆಗಳಿಗೆ ಯಾವ ರೀತಿ ಆರ್ಥಿಕ ನೆರವು ನೀಡಲಾಗಿದೆ ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಸಾಗರ ಮಾಲಾ ಯೋಜನೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೭೭೧ (೨೦೪೨) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರದ "ಸಾಗರ ಮಾಲಾ" ಯೋಜನೆ ಅಡಿಯಲ್ಲಿ ಕಡಲು ತೀರ ಅಭಿವೃದ್ಧಿ ಮತ್ತು ಸಣ್ಣ ಬಂದರುಗಳ ಅಭಿವೃದ್ದಿಗೆ ಇದುವರೆಗೂ ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು ; (ಜಿಲ್ಲಾವಾರು ಮತ್ತು ವರ್ಷಾವಾರು ಮಾಹಿತಿ ನೀಡುವುದು)

(ಆ) ಈ ಕಾರ್ಯಕ್ರಮಗಳ ಮತ್ತು ಯೋಜನೆಗಳ ಅನುಷ್ಠಾನಕ್ಕಾಗಿ ಸ್ಥಳಾಂತರಿಸಲಾದ ಕಡಲ ತೀರದ ಬಳಿ ಇರುವ ಕುಟುಂಬಗಳು ಎಷ್ಟು; ಮತ್ತು ಈ ಕುಟುಂಬಗಳ ಪುನರ್ವಸತಿಗೆ ಒದಗಿಸಲಾಗಿರುವ ಸವಲತ್ತುಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ "ಸಾಗರ ಮಾಲಾ" ಯೋಜನೆಯಡಿ ಕೈಗೊಂಡಿರುವ ಕಾರ್ಯಕ್ರಮ ಮತ್ತು ಅನುಷ್ಠಾನದಲ್ಲಿ ಅಂದಾಜು ಮೊತ್ತದ ಏರಿಕೆ ಮತ್ತು ಪೂರ್ಣಗೊಳಿಸಬೇಕಾದ ಕಾಲಾವಧಿ ಮೀರಲಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## PRAMC ಯೋಜನೆ ಅಡಿಯಲ್ಲಿ ರೂಪಿಸಿರುವ ಕಾರ್ಯಕ್ರಮಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೭೭೨ (೨೦೪೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ PRAMC ಯೋಜನೆ ಅಡಿಯಲ್ಲಿ ರೂಪಿಸಿರುವ ಕಾರ್ಯಕ್ರಮಗಳು ಯಾವುವು; ಮತ್ತು ಈ ಯೋಜನೆಗಳ ತಯಾರಿ ಅನುಷ್ಠಾನಗೊಳಿಸಲು ಸಂಸ್ಥೆಯಲ್ಲಿರುವ ಅಂಗಗಳು ಯಾವುವು; ಇವುಗಳ ಕಾರ್ಯ ನಿರ್ವಹಣೆ ಮತ್ತು ಆಚರಣೆ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಈ ಸಂಸ್ಥೆಯಲ್ಲಿ ರಸ್ತೆ ಸುರಕ್ಷತೆ ಬಗ್ಗೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು; ಈ ಕಾರ್ಯಕ್ರಮಗಳ ರೂಪುರೇಷೆ ಮತ್ತು ಅನುಷ್ಠಾನದ ವಿವರ ನೀಡುವುದು ;

(ಇ) ರಸ್ತೆ–ಸುರಕ್ಷತೆ ಅಡಿಯಲ್ಲಿ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳಲ್ಲಿರುವ ಕಿರಿದಾದ ಮತ್ತು ಹಳೆಯದಾದ ಸೇತುವೆಗಳ ಪುನಃಶ್ಚೇತನಗೊಳಿಸಲು ಗುರುತಿಸಲಾಗಿರುವ ಸೇತುವೆಗಳೆಷ್ಟು ಮತ್ತು ಈ ಸೇತುವೆಗಳ ಅಗಲೀಕರಣ ಯೋಜನೆಗಳ ಮತ್ತು ಪುನಃಶ್ಚೇತನಕ್ಕೆ ತಯಾರಿಸಿರುವ ಗುರಿ, ಸಾಧನೆಗಳೇನು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಕಿರಿದಾದ ಮತ್ತು ಹಳೇ ಸೇತುವೆಗಳ ಮೇಲೆ ಭಾರೀ ಗಾತ್ರದ ಮತ್ತು ಬಹುಗಾಲಿಗಳ ವಾಹನಗಳು ಚಲಿಸುತ್ತಿರುವುದರಿಂದ ತೀವ್ರವಾದ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಅಪಘಾತಗಳನ್ನು ನಿವಾರಿಸಲು ಇರುವ ವ್ಯವಸ್ಥೆ ಮತ್ತು ಈ ವ್ಯವಸ್ಥೆಯ ಕಾರ್ಯಾಚರಣೆಗಳು ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ಪಶ್ಚಿಮಘಟ್ಟ ಪ್ರದೇಶಗಳಲ್ಲಿ "ಶಾಲಾ–ಸಂಪರ್ಕ ಸೇತು" ಯೋಜನೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೭೭೩ (೨೦೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನ ಆಯ–ವ್ಯಯದಲ್ಲಿ ಪಶ್ಚಿಮಘಟ್ಟ ಪ್ರದೇಶಗಳಲ್ಲಿ ಸಂಪರ್ಕ ಸೇತುವೆ

ಇಲ್ಲದಿರುವ ಪ್ರಯುಕ್ತ ಶಾಲಾ ಮಕ್ಕಳು ಮತ್ತು ಹಳ್ಳಿಗಾಡಿನ ರೈತರಿಗೆ ಅನುಕೂಲ ಮಾಡಲು ರೂಪಿಸಿದ "ಶಾಲಾ-ಸಂಪರ್ಕ ಸೇತು" ಯೋಜನೆ ಯಾವ ಹಂತದಲ್ಲಿದೆ ; (ಯೋಜನೆಯ ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದ "ಶಾಲಾ-ಸಂಪರ್ಕ ಸೇತು" ನಿರ್ಮಾಣದ ಅಗತ್ಯತೆ ಎಷ್ಟು; ಈ ಯೋಜನೆಯಡಿ ಗುರುತಿಸಿ ಕಾರ್ಯಕ್ರಮ ಪಟ್ಟಿ (Programme of Work) ಯುಲ್ಲಿ ಅಳವಡಿಸಿರುವ ಕಾರ್ಯಕ್ರಮಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ "ಶಾಲಾ-ಸಂಪರ್ಕ ಸೇತು" ಯೋಜನೆ ಅಡಿಯುಲ್ಲಿ ರೂಪಿಸಿದ ಕಾರ್ಯುಕ್ರಗಳೆಷ್ಟು ಮತ್ತು ಈ ಕಾರ್ಯಕ್ರಮದಡಿ ಒದಗಿಸಿದ ಅನುದಾನ, ಭೌತಿಕ-ಆರ್ಥಿಕಗುರಿ ಮತ್ತು ಸಾಧನೆ ಎಷ್ಟು ; ಮತ್ತು ಬಾಕಿ ಉಳಿದಿರುವ ಕಾರ್ಯಕ್ರಮಗಳು ಯಾವುವು ; ಗುರುತಿಸಿರುವ ಸೇತುವೆಗಳ ನಿರ್ಮಾಣ ಯಾವ ಅವಧಿಯಲ್ಲಿ ಪೂರ್ಣಗೊಳಿಸಲಾಗುವುದು ; (ಜಿಲ್ಲಾವಾರು ಮತ್ತು ವರ್ಷಾವಾರು ಮಾಹಿತಿ ನೀಡುವುದು)

(ಈ) ೨೦೨೧-೨೨ನೇ ಸಾಲಿನಲ್ಲಿ "ಶಾಲಾ ಸಂಪರ್ಕ ಸೇತು" ಯೋಜನೆಗೆ ನೀಡಿರುವ ಅನುದಾನವೆಷ್ಟು ; ಈ ಅನುದಾನ ಅಗತ್ಯವಿರುವ ಸೇತುವೆಗಳ ನಿರ್ಮಾಣಕ್ಕೆ ಸಾಕಾಗುವುದೇ ? (ಸಂಪೂರ್ಣ ವಿವರ ನೀಡುವುದು)

## ವಸತಿ ಯೋಜನೆ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೭೭೪ (೨೦೫೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ವಸತಿ ನಿವೇಶನ ರಹಿತರ ಸಂಖ್ಯೆ ಎಷ್ಟು; ನಿವೇಶನ ರಹಿತರಿಗೆ ಹಂಚಿಕೆ ಮಾಡಲು ಅಗತ್ಯವಿರುವ ಜಮೀನು ಎಷ್ಟು ; ಮತ್ತು ಲಭ್ಯವಿರುವ ಜಮೀನು ಎಷ್ಟು ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೦೩ ವರ್ಷಗಳಿಂದ ಆಶ್ರಯ ಯೋಜನೆಯಡಿ ಅರ್ಜಿ ಸಲ್ಲಿಸಲಾದ ಫಲಾನುಭವಿಗಳೆಷ್ಟು ; ಈ ಪೈಕಿ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೦೩ ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ಆಶ್ರಯ ಯೋಜನೆಯಡಿ ಎಷ್ಟು ಮನೆಗಳು ನಿರ್ಮಿಸಲಾಗಿದೆ ; ಇದರಲ್ಲಿ ಪ್ರಗತಿಯಲ್ಲಿರುವ ಮನೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಸರ್ಕಾರಿ ಭೂಮಿ ರಕ್ಷಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭೪ (೧೭೩೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆ ವ್ಯಾಪ್ತಿಯಲ್ಲಿರುವ ಸರ್ಕಾರಿ ಭೂಮಿ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ಸ್ಮಶಾನ, ಗೋಮಾಳ, ಖರಾಬು, ಸರ್ಕಾರಿ ಕೆರೆಗಳ ವಿವರಗಳೇನು ? (ಕಂದಾಯ ತಾಲ್ಲೂಕುವಾರು ಸರ್ವೇ ಸಂಖ್ಯೆ, ವಿಸ್ತೀರ್ಣಗಳೊಂದಿಗೆ ಪ್ರತ್ಯೇಕ ವಿವರಗಳನ್ನು ನೀಡುವುದು)

## ರಾಜ್ಯದಲ್ಲಿನ ಸರ್ಕಾರಿ ಕೆರೆ ಸ್ಮಶಾನ ಮತ್ತು ಗೋಮಾಳಗಳನ್ನು ಸರ್ವೇ ಮಾಡಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭೬ (೨೦೧೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಆಸ್ತಿ, ಕೆರೆ, ಗೋಮಾಳ, ಸ್ಮಶಾನಗಳನ್ನು ಸರ್ವೇ ನಡೆಸಿ ಗುರುತಿಸುವ ಕಾರ್ಯ ಮಾಡಲಾಗಿದೆಯೇ ; ಇದ್ದಲ್ಲಿ, ಜಿಲ್ಲಾವಾರು ವಿವರ ನೀಡುವುದು ;

(ಆ ಅನಧಿಕೃತವಾಗಿ ಸ್ಮಶಾನ, ಕೆರೆಗಳನ್ನು ಒತ್ತುವರಿ ಮಾಡಿರುವವರ ಬಗ್ಗೆ ಸರ್ಕಾರದ ಕ್ರಮಗಳೇನು ; ಈ ನಿಟ್ಟಿನಲ್ಲಿ ಸರ್ವೇ ಕಾರ್ಯಗಳನ್ನು ತ್ವರಿತವಾಗಿ ಮಾಡಿಸಲು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಈ ಹಿಂದೆ ರಾಜ್ಯದ ಎಲ್ಲಾ ಕಂದಾಯ ಭೂಮಿಯನ್ನು ಸರ್ವೇ ಮಾಡುವ ಕಾರ್ಯಕ್ಕೆ ಚಾಲನೆ ನೀಡಲಾಗಿದ್ದು, ಅದು ಈಗ ಯಾವ ಹಂತದಲ್ಲಿದೆ ? (ಜಿಲ್ಲಾವಾರು ವಿವರ ನೀಡುವುದು)

## ಗಂಗಾ ಕಲ್ಯಾಣ ಯೋಜನೆಯಲ್ಲಿನ ಲೋಪಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭೭ (೨೦೧೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆಸಲಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಪೂರ್ಣ ಕಾಮಗಾರಿ ನಡೆದು ಫಲಾನುಭವಿಗಳ ಕೈ ಸೇರಿರುವ ಘಟಕಗಳೆಷ್ಟು ; ಹಾಗೂ ಇನ್ನೂ ಅಪೂರ್ಣವಾಗಿರುವ ಘಟಕಗಳೆಷ್ಟು ; ಇವುಗಳ ಇಂದಿನ ಸ್ಥಿತಿಗಳೊಂದಿಗೆ ಮತ್ತು ಇವುಗಳನ್ನು ಕೊರೆದಿರುವ ಊರಿನ ಹೆಸರು, ಫಲಾನುಭವಿಗಳ ವಿವರದೊಂದಿಗೆ ಮಾಹಿತಿ ನೀಡುವುದು ;

(ಇ) ಈ ಯೋಜನೆಯಡಿಯಲ್ಲಿ ಕೊಳವೆ ಬಾವಿಯನ್ನು ಕೊರೆಯಲು ಇರುವ ಮನದಂಡಗಳೇನು ; ಟೆಂಡರ್ ಪ್ರಕ್ರಿಯೆ ಕಾಮಗಾರಿಯನ್ನು ಪಡೆದ ಟೆಂಡರ್‌ದಾರರು ಸರಿಯಾದ ಸಮಯಕ್ಕೆ ಕಾಮಗಾರಿ ನಡೆಸದಿದ್ದರೆ, ಅವರ ಮೇಲೆ ಕೈಗೊಳ್ಳುವ ಕ್ರಮಗಳೇನು ; ಇಲ್ಲಿಯವರೆವಿಗೆ ಯಾವ ಟೆಂಡರ್‌ದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿನ ಪಶು ಆಸ್ಪತ್ರೆಗಳನ್ನು ಉನ್ನತ್ತೀಕರಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭೮ (೨೦೧೨) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳ ಮತ್ತು ಪಶು ವೈದ್ಯರ ಸಂಖ್ಯೆ ಎಷ್ಟು ; (ಆಸ್ಪತ್ರೆಗಳ ಹೆಸರುಗಳೊಂದಿಗೆ ವಿವರ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಹೊಸ ಪಶು ಆಸ್ಪತ್ರೆಗಳು ಮಂಜೂರಾಗಿವೆ ; ಇಲ್ಲದಿದ್ದಲ್ಲಿ, ಹೊಸ ಆಸ್ಪತ್ರೆಗಳ ಸ್ಥಾಪನೆ ಕೋರಿ ಎಷ್ಟು ಪ್ರಸ್ತಾವನೆಗಳು ಸರ್ಕಾರಕ್ಕೆ ಸಲ್ಲಿಕೆಯಾಗಿದೆ ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಇ) ಈ ಪಶು ಆಸ್ಪತ್ರೆಗಳಿಗೆ ಕಳೆದ ಮೂರು ವರ್ಷಗಳಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ? (ಪೂರ್ಣ ವಿವರ ನೀಡುವುದು)

## ನೇಮಕಾತಿ ಪ್ರಾಧಿಕಾರದಿಂದ ಮೀಸಲಾತಿ ಪ್ರಕಾರ ಆಯಾಯಾ ವರ್ಗಗಳ ಅಭ್ಯರ್ಥಿಗಳ ನೇಮಕಾತಿ ನಡೆಯದಿರುವುದರ ತನಿಖೆ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೧೭೭೯ (೨೦೦೨) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೇಮಕಾತಿ ಪ್ರಾಧಿಕಾರಿಗಳು ಹಿಂದುಳಿದ ವರ್ಗಗಳಿಗೆ ಸರ್ಕಾರ ನಿಗದಿಪಡಿಸಿರುವ ಮೀಸಲಾತಿ ಪ್ರಕಾರ ಆಯಾ ವರ್ಗಗಳಿಗೆ ಮೀಸಲಾತಿ ನೀಡಿರುವ ಬಗ್ಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ತನಿಖೆ ಮಾಡಲು ಪ್ರತ್ಯೇಕ ವಿಭಾಗವಿದೆಯೇ ;

(ಆ) ಹಾದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಘಟಕ–ಕಛೇರಿಗಳನ್ನು ತಪಾಸಣೆ ಮಾಡಲಾಗಿದೆ ; (ವರ್ಷವಾರು ವಿವರಗಳನ್ನು ನೀಡುವುದು)

(ಇ) ಯಾವ ಯಾವ ಇಲಾಖೆಗಳಲ್ಲಿ ಮೀಸಲಾತಿ ವಿಚಲನೆ ಆಗಿದೆ; ಅವರ ಮೇಲೆ ಕೈಗೊಂಡಿರುವ ಕ್ರಮಗಳೇನು ;

(ಈ) ಇಲಾಖೆ ಆಯುಕ್ತರು ಮೀಸಲಾತಿ ಬಗ್ಗೆ ಎಷ್ಟು ಘಟಕ–ಕಛೇರಿಗಳ ಪರಿಶೀಲನೆ ಮಾಡಿರುತ್ತಾರೆ; ಮಾಡದಿದ್ದಲ್ಲಿ ಕಾರಣವನ್ನು ತಿಳಿಸುವುದು ?

## ಸಿವಿಲ್ ಸೇವೆಗಳಲ್ಲಿ ಓ.ಬಿ.ಸಿ ವಿದ್ಯಾರ್ಥಿಗಳ ನೇಮಕಾತಿ ಕೊರತೆಯ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೧೭೮೦ (೨೦೦೪) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿಯಲ್ಲಿ ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳ ಕೊರತೆಯಿಂದ

ಭರ್ತಿಯಾಗದೇ ಉಳಿದ ರಿಕ್ತ ಸ್ಥಾನಗಳನ್ನು ಬ್ಯಾಕ್‌ಲಾಗ್ ಹುದ್ದೆಗಳೆಂದು ಪರಿಗಣಿಸಲು ಯಾವ ದಿನಾಂಕದಂದು ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ ; (ಅದರ ಪ್ರತಿ ಒದಗಿಸುವುದು)

(ಆ) ಸರ್ಕಾರ ಆದೇಶ ಹೊರಡಿಸಿದ ದಿನಾಂಕದಿಂದ ಎಷ್ಟು ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಲಾಗಿದೆ ; (ಪ್ರವರ್ಗವಾರು ವಿವರ ನೀಡುವುದು)

(ಇ) ಈ ಪೈಕಿ ಎಷ್ಟು ಹುದ್ದೆಗಳನ್ನು ತುಂಬಲಾಗಿದೆ ; (ಪ್ರವರ್ಗವಾರು ವಿವರ ನೀಡುವುದು)

(ಈ) ಹುದ್ದೆಗಳನ್ನು ಗುರುತಿಸಲು ವಿಳಂಬವಾಗಿರುವುದಕ್ಕೆ ಕಾರಣವೇನು ;

(ಉ) ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ?

## ಮೀನುಗಾರಿಕೆ ಇಲಾಖೆಯಿಂದ ಮೀನು ಸಾಕಾಣಿಕೆ ಹಾಗೂ ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳ ಹಂಚಿಕೆ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮೧ (೨೦೧೮) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ನೇ ಸಾಲಿನಲ್ಲಿ ಕಾರವಾರ ಜಿಲ್ಲೆಯಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮೀನು ಮರಿಗಳನ್ನು ಕೆರೆಗಳಲ್ಲಿ ಸಾಕಾಣೆ ಮಾಡಲು ಅನುಸರಿಸಲಾಗಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕೆರೆಗಳಲ್ಲಿ/ಡ್ಯಾಂ/ಕಟ್ಟೆಗಳಲ್ಲಿ ಮೀನು ಸಾಕಾಣಿಕೆಗಾಗಿ ನೀಡಿರುವ ಅನುದಾನವೆಷ್ಟು ; (ವರ್ಷವಾರು ಹಾಗೂ ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ಕೆರೆಗಳಲ್ಲಿ/ಡ್ಯಾಂ/ಕಟ್ಟೆಗಳಲ್ಲಿ ಮೀನು ಸಾಕಾಣಿಕೆ ಟೆಂಡರ್ ಕರೆಯಲಾಗಿದೆ ; (ವರ್ಷವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಅವಧಿಯಲ್ಲಿ ಮೀನು ಸಾಕಾಣಿಕೆಗಾಗಿ ಸರ್ಕಾರದಿಂದ ಯಾವ ಯಾವ ಯೋಜನೆಗಳಲ್ಲಿ ಎಷ್ಟೆಷ್ಟು ಅನುದಾನವನ್ನು ನೀಡಲಾಗಿದೆ ; (ವರ್ಷವಾರು ಹಾಗೂ ಕಾರವಾರ ಜಿಲ್ಲೆಯ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ಕಾರವಾರ ಜಿಲ್ಲೆಯಲ್ಲಿ ೨೦೧೯–೨೦ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಮಂಜೂರು ಮಾಡಲಾಗಿರುವ ಮನೆಗಳೆಷ್ಟು; ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಲಾಗಿರುವ ಮಾನದಂಡಗಳೇನು ? (ಕಾರವಾರ ಜಿಲ್ಲೆಯ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ವಸತಿ ಗೃಹದಲ್ಲಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯ ಒದಗಿಸುವಲ್ಲಿ ಅವ್ಯವಹಾರ ಆಗುತ್ತಿರುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮೨ (೨೦೧೭) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಅವು ಯಾವುವು ; (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಹಾಸ್ಟೆಲ್‌ಗಳನ್ನು ೨೦೧೯–೨೦ ಹಾಗೂ ೨೦೨೦–೨೧ನೇ ಸಾಲಿನಲ್ಲಿ ಯಾವಾಗ ಪ್ರಾರಂಭಿಸಲಾಯಿತು; ಅದರಲ್ಲಿ

ವಾಸ್ತವ್ಯವಿರುವ ಮಕ್ಕಳ ಸಂಖ್ಯೆ ಎಷ್ಟು; ಇವರಿಗೆ ನೀಡಿರುವ ಮೂಲಭೂತ ಸೌಕರ್ಯ ಏನು ; (ವಾಸ್ತವ್ಯವಿರುವ ವಿದ್ಯಾರ್ಥಿಗಳ ಖರ್ಚು ವೆಚ್ಚದ ಸಂಪೂರ್ಣ ವಿವರ ನೀಡುವುದು)

(ಇ) ೨೦೨೦–೨೧ನೇ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿಗಳು ಹಾಸ್ಟೆಲ್‌ನಲ್ಲಿ ಪ್ರವೇಶಾತಿ ಪಡೆದಿರುತ್ತಾರೆ; ಹಾಸ್ಟೆಲ್‌ಗಳು ಪ್ರಾರಂಭಿಸಲು ಇರುವ ನಿಯಮಾವಳಿಗಳೇನು; ಸಂಬಂಧಿಸಿದ ವಿದ್ಯಾರ್ಥಿಗಳಿಗೆ ಯಾವ ದಿನಾಂಕದಿಂದ ಮೂಲಭೂತ ಸೌಲಭ್ಯ ಒದಗಿಸಿರುತ್ತೀರಿ ;

(ಈ) ಇಲ್ಲಿಯವರೆಗೆ ಬಂದಿರುವ ಅನುದಾನ ಮತ್ತು ಯಾವ ಯಾವ ಸೌಕರ್ಯಗಳಿಗೆ ಎಷ್ಟು ಮೊತ್ತವನ್ನು ಖರ್ಚು ಮಾಡಲಾಗಿದೆ ? (ತಿಂಗಳವಾರು, ವರ್ಷವಾರು ಯಾವ ಯಾವ ಲೆಕ್ಕಶೀರ್ಷಿಕೆಯಲ್ಲಿ ಅನುದಾನ–ಖರ್ಚು ಮಾಡಿರುವ ಸವಿಸ್ತಾರ ವರದಿ ನೀಡುವುದು)

## ಭೂ ಪರಿವರ್ತನೆಗೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮೩ (೨೦೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಳೆದ ೩ ವರ್ಷಗಳಲ್ಲಿ ಭೂ ಪರಿವರ್ತನೆಗಾಗಿ ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ; ಯಾವ ಯಾವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ ; ಇವುಗಳಲ್ಲಿ ವಿಲೇವಾರಿಯಾದ ಅರ್ಜಿಗಳೆಷ್ಟು ; (ಪ್ರಕರಣವಾರು ವಿವರ ಒದಗಿಸುವುದು)

(ಆ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಳೆದ ೩ ವರ್ಷಗಳಲ್ಲಿ ಕೈಗಾರಿಕೆಯನ್ನು ಸ್ಥಾಪಿಸುವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಸಲ್ಲಿಕೆಯಾದ ಅರ್ಜಿಗಳೆಷ್ಟು; ಹಾಗೂ ವಿಲೇವಾರಿಯಾಗದೇ ಬಾಕಿ ಇರುವ ಅರ್ಜಿಗಳೆಷ್ಟು ; (ವಿವರವನ್ನು ಪ್ರಕರಣವಾರು ಒದಗಿಸುವುದು)

(ಇ) ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ನೀಡಲು ಯಾವ ಕಾಯ್ದೆಯಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ ; (ಕಾಯ್ದೆಯ ಸಂಪೂರ್ಣ ವಿವರ ನೀಡುವುದು)

(ಈ) ಕರ್ನಾಟಕ ಭೂ ಕಂದಾಯ ಅಧಿನಿಯಮದಡಿ ಕೆಲವು ತುರ್ತು ಸಂದರ್ಭಗಳಲ್ಲಿ ಸರ್ಕಾರಿ ಭೂಮಿಯನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಯವರಿಗೆ ಅವಕಾಶ ಕಲ್ಪಿಸಲಾಗಿದೆಯೇ ; ಹಾಗಿದ್ದಲ್ಲಿ, ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು ;

(ಉ) ಸರ್ಕಾರಿ ಶಾಲೆಗಳು, ಸರ್ಕಾರಿ ವಸತಿ ಶಾಲೆಗಳು ಹಾಗೂ ಇತರೆ ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ಮಾಡಲು ಇರುವಂತಹ ಮಾನದಂಡಗಳೇನು ? (ವಿವರ ನೀಡುವುದು)

## ಕೋವಿಡ್–೧೯ ಬಳಲುತ್ತಿರುವವರಿಗೆ ಖರ್ಚು ಮಾಡಿದ ವಿವರ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮೪ (೨೦೨೦) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕಿನಲ್ಲಿ ಬರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಸತಿ ಗೃಹದಲ್ಲಿ ಕೋವಿಡ್–೧೯ ಮಹಾಮಾರಿ ಖಾಯಿಲೆಗೆ ನೀಡಿರುವ ವಸತಿ ಗೃಹಗಳ ಸಂಖ್ಯೆಗಳೆಷ್ಟು; ಸದರಿ ವಸತಿ ಗೃಹದಲ್ಲಿ ಇಲ್ಲಿಯವರೆಗೆ ಎಷ್ಟು ಜನ ಕೋವಿಡ್‌ನಿಂದ ಬಳಲುತ್ತಿರುವವರನ್ನು ದಾಖಲೆ ಮಾಡಿಸಿಕೊಂಡಿರುತ್ತಾರೆ ; ಇವರಿಗೆ ಪ್ರತಿ ಹಂತದಲ್ಲೂ ಆಗಿರುವ ಖರ್ಚು ಎಷ್ಟು ; (ಸವಿಸ್ತಾರವಾಗಿ ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

(ಆ) ಈಗಾಗಲೇ ಕೋವಿಡ್–೧೯ ಮಹಾಮಾರಿ ಖಾಯಿಲೆ ಸಲುವಾಗಿ ಮಾರ್ಚ್–೨೦೨೦ ರಿಂದ ಜನವರಿ ೨೦೨೧ನೇ ವರೆಗೆ ಬಂದಿರುವ ರೋಗಿಗಳಿಗೆ ವಿಶ್ರಾಂತಿ ಮಾಡಲು ಖರೀದಿಸಿರುವ

ಬೆಡ್‌ಗಳ ಸಂಖ್ಯೆ ಎಷ್ಟು; ಸದರಿ ಬೆಡ್‌ಗಳನ್ನು ಮುಂದೆ ವಸತಿ ಗೃಹಗಳಿಗೆ ಬರುವ ವಿದ್ಯಾರ್ಥಿಗಳಿಗೆ ನೀಡುತ್ತೀರೋ ಹೇಗೆ ; (ವಿವರ ನೀಡುವುದು)

(ಇ) ಹಾಗಾದರೆ, ಈಗ ಶಾಲಾ ಕಾಲೇಜುಗಳು ಆರಂಭವಾಗಿದ್ದು, ವಿದ್ಯಾರ್ಥಿಗಳು ವಸತಿ ಗೃಹದಲ್ಲಿ ವಾಸ್ತವ್ಯ ಮಾಡಲು ಮುನ್ನೆಚ್ಚರಿಕೆಯಾಗಿ ಕೈಗೊಂಡಿರುವ ಕ್ರಮಗಳೇನು ? (ಸವಿಸ್ತಾರ ವರದಿ ನೀಡುವುದು)

## ಡೊಮಗೇರಾ ಗ್ರಾಮವನ್ನು ದಾಂಡೇಲಿ ತಾಲ್ಲೂಕಿಗೆ ಸೇರ್ಪಡೆಗೊಳಿಸಬಾರದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮೫ (೨೦೨೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಡೊಮಗೇರಾ ಗ್ರಾಮವನ್ನು ದಾಂಡೇಲಿ ತಾಲ್ಲೂಕಿಗೆ ಸೇರ್ಪಡೆಗೊಳಿಸಬಾರದೆಂದು ಆಗ್ರಹಿಸಿ ಗ್ರಾಮಸ್ಥರು ಪ್ರತಿಭಟನೆ ಮಾಡುತ್ತಿದ್ದು ಎಲ್ಲಾ ಅಧಿಕಾರಿಗಳಿಗೆ ಪತ್ರದ ಮುಖಾಂತರ ವಿನಂತಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಡೋಮಗೇರಾ ಗ್ರಾಮದ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಠಿಯಿಂದ, ಸದರಿ ಗ್ರಾಮವನ್ನು ಹಳಿಯಾಳ ತಾಲ್ಲೂಕಿನಲ್ಲಿಯೇ ಇರಲು ಕ್ರಮ ಕೈಗೊಳ್ಳಲಾಗುವುದು ?

## ಕಂದಾಯ ಇಲಾಖೆಯಲ್ಲಿ ಪೋಡಿಗೆ ಸಂಬಂಧಿಸಿದ ಮಾಹಿತಿ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮೬ (೨೦೫೧) ಮಾನ್ಯ ಕಂದಾಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕು ವಡೇರ ಹೋಬಳಿ ಸರ್ವೆ ನಂ. ೧೩೩/zpl ನಂಜು ೦.೧೩ ಎಕರೆ ಜಾಗಕ್ಕೆ ಸಂಬಂಧಿಸಿದಂತೆ ಖಾತೆ ನಂ. ೪೬೧೩ ಎಂ.ಆರ್.ಟಿ. ೩೩೪/೨೦೧೬, ಆರ್.ಎ. ೧೧೯/೨೦೧೭, ದಿನಾಂಕ : ೧೩-೧೧-೨೦೧೭, ಮತ್ತು ಆರ್.ಆರ್.ಟಿ.ಸಿ.ಆರ್/೩೮/೧೮-೧೯, ದಿನಾಂಕ : ೨೮-೦೭-೨೦೧೮ಗೆ ಸಲ್ಲಿಸಲಾಗಿರುವ ದಾಖಲಾತಿಗಳು ಯಾವುವು ? (ಎಲ್ಲಾ ದಾಖಲೆಗಳನ್ನೊಳಗೊಂಡಂತೆ ಸಂಪೂರ್ಣ ನಡವಳಿಯ ಪ್ರತಿಗಳನ್ನು ನೀಡುವುದು)

## ಹುಣಸೂರು ಜಿಲ್ಲೆಯ ರಚನೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೮೭ (೨೦೨೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹುಣಸೂರು ಜಿಲ್ಲೆ (ಡಿ. ದೇವರಾಜ ಅರಸ್ ಜಿಲ್ಲೆ)ಯನ್ನು ರಚಿಸುವ ಬಗ್ಗೆ ಜನಾಭಿಪ್ರಾಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸಾರ್ವಜನಿಕರಿಂದ ಮನವಿಗಳು ಬಂದಿದೆಯೇ ; ಈ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ವರುಣಾ ಮತ್ತು ಬನ್ನೂರು ತಾಲ್ಲೂಕುಗಳ ರಚನೆಯ ಬಗ್ಗೆ ಸರ್ಕಾರಕ್ಕೆ ಮನವಿಗಳು ಬಂದಿವೆಯೇ; ಈ ಎರಡು ತಾಲ್ಲೂಕುಗಳನ್ನು ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಇ) ಮೇಲ್ಕಂಡ ವಿಚಾರದಲ್ಲಿ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸಮಿತಿಯನ್ನು ರಚಿಸಲಾಗುವುದೇ ?

# ಹನೂರು ಮಿನಿ ವಿಧಾನಸೌಧ ನಿರ್ಮಾಣ ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಹೊಸ ಉಪ ವಿಭಾಗ ಪ್ರಾರಂಭಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮೮ (೨೦೨೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹನೂರು ತಾಲ್ಲೂಕಿನಲ್ಲಿ ತಾಲ್ಲೂಕು ಆಡಳಿತವನ್ನು ಸುಗಮಗೊಳಿಸಲು ತಾಲ್ಲೂಕು ಮಟ್ಟದ ಎಲ್ಲಾ ಕಛೇರಿಗಳೂ ಒಂದೆಡೆ ಇರುವಂತೆ, ಮಿನಿ ವಿಧಾನಸೌಧ ನಿರ್ಮಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ ;

(ಆ) ಈ ಪ್ರಸ್ತಾವನೆಗೆ ಸರ್ಕಾರದ ಅನುಮೋದನೆ ದೊರಕಿದೆಯೇ; ಮಿನಿ ವಿಧಾನಸೌಧ ನಿರ್ಮಾಣದ ಅಂದಾಜು ವೆಚ್ಚ ಎಷ್ಟು; ಯಾವ ಕಾಲಮಿತಿಯಲ್ಲಿ ಈ ಮಿನಿ ವಿಧಾನಸೌಧ ನಿರ್ಮಾಣ ಕಾಮಗಾರಿಯನ್ನು ಆರಂಭಿಸಲಾಗುವುದು ;

(ಇ) ಚಾಮರಾಜನಗರ ಜಿಲ್ಲೆಯಲ್ಲಿ ಒಂದೇ ರೆವಿನ್ಯೂ ಉಪವಿಭಾಗವಿದ್ದು, ಸಾರ್ವಜನಿಕ ಆಡಳಿತದ ಹಿತದೃಷ್ಟಿಯಿಂದ ಚಾಮರಾಜನಗರದಲ್ಲಿ ಇನ್ನೊಂದು ಉಪವಿಭಾಗವನ್ನು ರಚಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0217/500 ಪ್ರತಿಗಳು/17–03–2021